

# ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ

Editor : MARUTI BASAVANTAPPA HOSAMANI

Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

RNI REG No. : KARKAN/2016/75068

SIHI KAHI

KANNADA DAILY MORNING

BAGALKOT

Volume : 06 | Issue : 271 | Saturday 06-07-2024 | E-mail : maruti.b.hosamani76@gmail.com | Page: 4 | Price : Rs. 1/-


## ಮಾಜಿ ದೇವದಾಸಿ ತಾಯಂದಿರಿಗೆ ಕಾನೂನಿನ ಅರಿವು ನೆರವು ಕಾರ್ಯಕ್ರಮ







**ಕುಷ್ಟಗಿ :** ಮಾಜಿ ದೇವದಾಸಿ ತಾಯಂದಿರಿಗೆ ಕಾನೂನು ನೆರವು ಕಾರ್ಯಕ್ರಮ ಹಾಗೂ ತಾಲೂಕು ಮಟ್ಟದ ಆರೋಗ್ಯ ತಪಾಸಣಾ ಶಿಬಿರ ಮತ್ತು ಎಸ್ ಎಸ್ ಎಲ್ ಸಿ ಯಲ್ಲಿ ಅತ್ಯುತ್ತಮ ಫಲಿತಾಂಶ ಪಡೆದ ಮಾಜಿ ದೇವದಾಸಿ ತಾಯಂದಿರ ಮಕ್ಕಳನ್ನು ಈ ಒಂದು ವೇದಿಕೆ ಮೇಲೆ ಸನ್ಮಾನಿಸಿ ಗೌರವಿಸಲಾಯಿತು. ಕುಷ್ಟಗಿ ತಾಲೂಕಿನ ಕೊಪ್ಪಳಜಿಲ್ಲಾಕಾನೂನುಸೇವಗಳಪ್ರಾಧಿಕಾರ ಕೊಪ್ಪಳಹಾಗೂತಾಲೂಕುಕಾನೂನುಸೇವಾ ಸಮಿತಿ ಕುಷ್ಟಗಿ ವಕೀಲರ ಸಂಘ ಕುಷ್ಟಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕೊಪ್ಪಳಕರ್ನಾಟಕರಾಜ್ಯಮಹಿಳಾಅಭಿವೃದ್ಧಿ ನಿಗಮ ದೇವದಾಸಿ ಪುನರ್ವಸತಿ ಯೋಜನೆ ಕಂದಾಯ ಇಲಾಖೆ ಪೊಲೀಸ್ ಇಲಾಖೆ ಆರೋಗ್ಯ ಇಲಾಖೆ ಸಮಾಜ ಕಲ್ಯಾಣ ಇಲಾಖೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಕಾನೂನು ಸೇವೆಗಳ ಪ್ರಾಧಿಕಾರದ ಮೂಲಕ ವಿಪತ್ತು ಸಂತ್ರಸ್ತರಿಗೆ ಕಾನೂನು ಸೇವೆಗಳು (ಯೋಜನೆ 2010) ಮಾಜಿ ದೇವದಾಸಿ ಮಹಿಳೆಯರಿಗಾಗಿ ಕಾನೂನು ಅರಿವು ನೆರವು ಕಾರ್ಯಕ್ರಮ ಹಾಗೂ ತಾಲೂಕು ಮಟ್ಟದ ಉಚಿತ ಆರೋಗ್ಯ ಶಿಬಿರ ದಿನಾಂಕ 04/07 /2024 ಗುರುವಾರ ರಂದು ಕುಷ್ಟಗಿ ನಗರದ ವೀರ ಮಹೇಶ್ವರಿ ಸಮುದಾಯ ಭವನದಲ್ಲಿ ಹಮ್ಮಿಕೊಳ್ಳಲಾಗಿತ್ತು ಕಾರ್ಯಕ್ರಮದ ಉದ್ಘಾಟಕರಾಗಿ ಗೌರವಾನ್ವಿತ ಸನ್ಮಾನ್ಯ ಶ್ರೀ ಎಂ ಎಲ್ ಪೂಜೇರಿ ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ತಾಲೂಕು ಕಾನೂನು ಸೇವಾ ಸಮಿತಿ ಕುಷ್ಟಗಿ ಇವರು ಉದ್ಘಾಟನೆ ಭಾಷಣ ಮಾಡಿದರು ಕಾನೂನು ಸೇವೆಗಳ ಪ್ರಾಧಿಕಾರದ ಧ್ಯೇಯೋದ್ದೇಶಗಳ ಬಗ್ಗೆ ತಿಳಿಸಿದರು. ಹಾಗೂ ಗೌರವಾನ್ವಿತ ಸನ್ಮಾನ್ಯ ಶ್ರೀ ಮಹಾಂತೇಶ ಚೌಳಗಿ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಉಪಸ್ಥಿತರಿದ್ದರು. ಹಾಗೂ ಶ್ರೀಮತಿ ಪೂರ್ಣಿಮಾ ಯೋಳಬಾವಿ ಯೋಜನಾಧಿಕಾರಿಗಳು ದೇವದಾಸಿ ಪುನರ್ ವಸತಿ ಯೋಜನೆ, ಮಾಜಿ ದೇವದಾಸಿ ತಾಯಂದಿರಿಗೆ ಸರಕಾರದಿಂದ ಮಾಸಿಕ 1500 ಕೊಡುತ್ತದೆ ಹಾಗೂ ವಸತಿ ಸೌಲಭ್ಯ ಸಾಲ ಸೌಲಭ್ಯ ತಗೊಂಡು ಎಲ್ಲಾ ಮಹಿಳೆಯರಂತೆ ಮುಖ್ಯ ವಾಹಿನಿಗೆ ಬರಲು ಸಲಹೆ ನೀಡಿ ದೇವದಾಸಿ ಅನಿಷ್ಟ ಪದ್ಧತಿ ಎಲ್ಲಾದರು ಕಂಡು ಬಂದಲ್ಲೇ ತಕ್ಷಣವೇ ನಮ್ಮ ಇಲಾಖೆಯ ಸಿಬ್ಬಂದಿಗಳಿಗಾಗಲಿ ಪೊಲೀಸ್ ಇಲಾಖೆಗೆ ಮಾಹಿತಿ ಕೊಡಲು ಕಾರ್ಯಕ್ರಮಕ್ಕೆ ಆಗಮಿಸಿದ ಎಲ್ಲಾ ತಾಯಂದಿರಿಗೂ ತಿಳಿಸಿದರು. ಮುಖ್ಯ ಅತಿಥಿಗಳಾಗಿ ಶ್ರೀ ವಿಜಯ ಮಹಾಂತೇಶ ಕೆ ಕುಷ್ಟಗಿ ವಕೀಲ ಸಂಘದ ಅಧ್ಯಕ್ಷರು ಶ್ರೀ ಬಾಲಚಂದ್ರ ಸಂಗನಾಳ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಶ್ರೀ ಕೆ ಎಸ್ ರೆಡ್ಡಿ ವೈದ್ಯಾಧಿಕಾರಿಗಳು ಕುಷ್ಟಗಿ ಆರೋಗ್ಯ ತಪಾಸಣದ ಕುರಿತು ಯಾವುದೇ ಕಾಯಿಲೆಗಳಿರಲಿ ನಾಚಿಕೆ ಪಡದೆ ಸಂಕೋಚ ಪಡದೆ ಆಸ್ಪತ್ರೆ ವೈದ್ಯರನ್ನು ಸಂಪರ್ಕಿಸಿ ರೋಗಗಳನ್ನುಗುಣ ಪಡಿಸಿ ಕೊಳ್ಳಬೇಕೆಂದು ಸಲಹೆ ನೀಡಿದರು. ಹಾಗೂ ಕುಷ್ಟಗಿ ನಮ್ಮ ಸಾರ್ವಜನಿಕಆಸ್ಪತ್ರೆಯಲ್ಲಿಮಾಜಿದೇವದಾಸಿ ತಾಯಂದಿರು ಕಾರ್ಯ ನಿರ್ವಹಿಸ್ತಿದ್ದು ಅವರನ್ನು ನಾವು ತುಂಬಾ ಗೌರವದಿಂದ ನೋಡುತ್ತಿದ್ದೇವೆ ಅವರು ನಮ್ಮ ಆಸ್ಪತ್ರೆಯಲ್ಲಿ ಮಾಡುವ ಕೆಲಸ ತುಂಬಾ ಶ್ಲಾಘನೀಯ ಎಂದು ಹೇಳಿದರು. ಸುಮಾರು 250 ಜನ ಮಾಜಿ ದೇವದಾಸಿ ತಾಯಂದಿರಿಗೆ ಇವತ್ತು ಆರೋಗ್ಯ ತಪಾಸಣಾ ಮಾಡಿಸಲಾಯಿತು ಐಸಿಟಿಸಿ ಡಿಪಿ ಸುಗರ್ ಜನರಲ್ ಚೆಕಪ್ ಇಂತಹ ಕಾರ್ಯಕ್ರಮ ಎಲ್ಲಾ ತಾಲೂಕಾ ಮಟ್ಟ ಜಿಲ್ಲಾ ಮಟ್ಟದಲ್ಲಿ ಮಾಡಿದರೆ ಉತ್ತಮ ಎಂದು ಸಲಹೆ ನೀಡಿದರು.

ಸತೀಶ್ ಸಿರಸ್ತೆದಾರರು ಕುಷ್ಟಗಿ ಪರಸಪ್ಪ ಎನ್ ಗುಜಮಾಗಡಿ ಅಪರ ಸರ್ಕಾರಿ ವಕೀಲರು ಶ್ರೀ ಮಾನಪ್ಪ ಪಿಎಸ್ಐ ಕ್ರೈಂ ಬ್ರಾಂಚ್ ಶಿವಕುಮಾರ್ ದೊಡ್ಮನಿ ಉಪಾಧ್ಯಕ್ಷರು ವಕೀಲರ ಸಂಘ ಬಸವರಾಜ್ ಲಿಂಗಸೂರು ಕಾರ್ಯದರ್ಶಿ, ವಕೀಲರ ಸಂಘ ಮೈನುದ್ದೀನ್ ಜಂಟಿ ಕಾರ್ಯದರ್ಶಿ ವಕೀಲರ ಸಂಘ ಚಂದುಲಿಂಗ ಕಲಾಲಬಂಡಿ ವಿಮುಕ್ತ ದೇವದಾಸಿ ಮಹಿಳಾ ವೇದಿಕೆ ಕುಷ್ಟಗಿ ಅತಿಥಿಉಪನ್ಯಾಸಕರಾಗಿನಾಗರಾಜ್‌ಕೆಮೈತ್ರಿ ಪ್ಯಾನಲ್ಲು ಇವರು ದೇವದಾಸಿ ಸಮರ್ಪಣ ನಿಷೇಧ ಕಾಯ್ದೆ ಕುರಿತು ಮಾತನಾಡಿದರು ಹಾಗೂ ಶ್ರೀ ಬಸವರಾಜ್ ಸಾರಥಿ ವಕೀಲರು ಕಾನೂನು ಸೇವೆಗಳ ಪ್ರಾಧಿಕಾರದ ಮೂಲಕ ವಿಪತ್ತು ಸಂತ್ರಸ್ತರಿಗೆ ಕಾನೂನು ಸೇವೆಗಳ ಕುರಿತು ಮಾತನಾಡಿದರು ಕಾರ್ಯಕ್ರಮ ಅಧ್ಯಕ್ಷತೆ ಶ್ರೀಮತಿ ಎಲ್ಲಮ್ಮ ಹಂಡಿ ಯೋಜನಾಧಿಕಾರಿಗಳು ವಹಿಸಿದ್ದರು ಎಸ್‌ಎಲ್ಸಿಯಲ್ಲಿ ಅತ್ಯುತ್ತಮ ಅಂಕ ಪಡೆದ ಕುಮಾರಿ ರಾಜೇಶ್ವರಿ ಗುಡ್ಡೂರು ಕುಮಾರಿ ಕುಮಾರಿ ಶರಣಮ್ಮ ಕಾಟಾಪುರ ಮತ್ತು ಶಿವಕುಮಾರ್ ಗುಡ್ಡೂರು ಮಾಜಿ ದೇವದಾಸಿ ತಾಯಿಂದರ ಮಕ್ಕಳಿಗೆ ಸನ್ಮಾನ್ಯ ಶ್ರೀ ನ್ಯಾಯಾಧೀಶರ ಮುಖಾಂತರ ಹಾಗೂ ವೇದಿಕೆ ಮೇಲಿರುವ ಎಲ್ಲಾ ಗಣ್ಯಮಾನ್ಯರು ಸೇರಿ ಸನ್ಮಾನ ಮಾಡಿ ಗೌರವಿಸಲಾಯಿತು ಕಾರ್ಯಕ್ರಮ ನಿರೂಪಣೆ ವೆಂಕಟೇಶ್ ಹೊಸಮನಿ ಕಲಾವಿದರು ಮಾಡಿದರು ಕಾರ್ಯಕ್ರಮ ಕಾರ್ಯಕ್ರಮ ಸ್ವಾಗತ ಮಾಡಿದರು ಶ್ರೀ ದಾದೇಸಾಹೇಬ ಹಿರೇಮನಿ ಯೋಜನಾ ಅನುಷ್ಠಾನಾಧಿಕಾರಿಗಳು ಕಾರ್ಯಕ್ರಮ ಸ್ವಾಗತ ಮಾಡಿದರು ಶ್ರೀ ಮರಿಯಪ್ಪ ಮುಳ್ಳೂರು ಯೋಜನಾ ಅನುಷ್ಠಾನಾಧಿಕಾರಿಗಳು ಕುಷ್ಟಗಿ ಕಾರ್ಯಕ್ರಮ ವಂದನಾರ್ಪಣೆ ಮಾಡಿದರು ಕೊಪ್ಪಳ ಶ್ರೀಮತಿ ರೇಣುಕಾ ಎಂ ಮಠದ್ ಯಜಮಾನಾಧಿಕಾರಿಗಳು ಯಲಬುರ್ಗಾ ಶ್ರೀಮತಿ ಸಕ್ಕುಬಾಯಿ ಯೋಜನಾ ಅನುಷ್ಠಾನಾಧಿಕಾರಿಗಳು ಕನಕಗಿರಿ ಕರ ಕಾರ್ಯಕ್ರಮದಲ್ಲಿ ಮಾಜಿದೇವದಾಸಿ ತಾಯಂದಿರು ಭಾಗವಹಿಸಿ ಅಂಗನವಾಡಿ ಮೇಲ್ವಿಚಾರಕರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

**ತಾಲೂಕ ವರದಿಗಾರರು ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಪ್ರತಾಪ್.ವಾಯ್. ಕಿಳ್ಳಿ.ಇಲಕಲ್ಲ**

## ಆಕಸ್ಮಿಕವಾಗಿ ಕಾಲು ಜಾರಿ ಬಿದ್ದಿರುವ ಆಕಳು ರಕ್ಷಿಸಿದ ಅಗ್ನಿಶಾಮಕ ದಳದ ಸಿಬ್ಬಂದಿಯವರು






**ಕಿರಣಗಿ :** ಅಥಣಿ ತಾಲೂಕಿನ ಕಿರಣಗಿ ಗ್ರಾಮದಲ್ಲಿ ಅಣ್ಣಪ್ಪ. ನಂದಗಾಂವರವರ ಆಕಳು ಅಂದಾಜು 30x30 ಅಡಿ ವಿಸ್ತಾರವಾದ 40 ರಿಂದ 45 ಅಡಿ ಆಳದ ಅದರಲ್ಲಿ 10 ಅಡಿ ಆಳದ ತೇರೆದ ನೀರಿರುವ ಭಾವಿ ಆಕಸ್ಮಿಕವಾಗಿ ಕಾಲು ಜಾರಿ ಆಕಳು ಬಿದ್ದಿದ್ದು,ಸದರಿ ಸ್ಥಳೀಯ ನಿವಾಸಿಗಳು ಘಟನೆಯ ವಿಷಯವನ್ನು ಅಥಣಿ ಅಗ್ನಿಶಾಮಕ ಠಾಣೆ ದೂರವಾಣಿ ಕರೆ ಮಾಡಿ ತಿಳಿಸಿದರು, ಕರೆ ಬಂದ ತಕ್ಷಣ ಜಲವಾಹನದೊಂದಿಗೆ ಅಗ್ನಿಶಾಮಕ ತಂಡ ಸ್ಥಳಕ್ಕೆ ದೌಡಾಯಿಸಿ ಕಾರ್ಯ ಪ್ರವೃತ್ತರಾಗಿ ಸುಮಾರು 40 ರಿಂದ 45 ಅಡಿ ಆಳದ ಅದರಲ್ಲಿ 10 ಅಡಿ ಬಾವಿಯಲ್ಲಿ ಹೋಸ ಹಗ್ಗಗಳ ಸಹಾಯದಿಂದ ಕೆಳಗಿಳಿದು ಸುಮಾರು 01:50 ಒಂದು ಘಂಟೆ ಐವತ್ತು ನಿಮಿಷಗಳ ಕಾಲ ಶ್ರಮವಹಿಸಿ ಸಿಬ್ಬಂದಿಯವರುಗಳು ಪ್ರಾಣ ರಕ್ಷಣೆಗಾಗಿ ಕೂಗುತ್ತಿದ್ದ ಆಕಳನ್ನು ಜೀವಂತವಾಗಿ ಅಗ್ನಿಶಾಮಕ ಇಲಾಖೆಯ ತಂಡ ರಕ್ಷಣೆ ಮಾಡಿರುತ್ತಾರೆ. ಈ ಸಮಯ ಪ್ರಜ್ಞೆ ಕಾರ್ಯವನ್ನು ವೀಕ್ಷಿಸಿದ ಕಿರಣಗಿ ಗ್ರಾಮದ ಸ್ಥಳೀಯ ನಿವಾಸಿಗಳು ಅಗ್ನಿಶಾಮಕ ತಂಡದ ಕಾರ್ಯದಕ್ಷತೆಯನ್ನು ಮೆಚ್ಚಿ ಶ್ಲಾಘಿಸಿ ಹಾಗೂ ಹಸ್ತಲಾಗವ ಮಾಡಿ ಆಕಳ ಪ್ರಾಣ ರಕ್ಷಣೆ ಮಾಡಿದ್ದಕ್ಕಾಗಿ ಅಭಿನಂದನೆ ಸಲ್ಲಿಸಿದರು.

ಸಹಾಯಕ ಅಗ್ನಿಶಾಮಕ ಠಾಣಾಧಿಕಾರಿ ಎ.ಡಿ ಮುಲ್ಲಾ ರವರ ನೇತ್ರತ್ವದಲ್ಲಿ , ಅನಿಲ ಬಡಚಿರವರ , ಮಲ್ಲನಗೌಡ ನಾಯ್ಕ , ಮಹಾದೇವ ಚೌಗಲಾ ಕಲ್ಮೇಶ್ ಚಿಮ್ಮಡ , ಸಂತೋಷ್ ಚೌಗಲಾ , ಭಾಗವಹಿಸಿದ್ದರು.

## ಇಂದು ಡಾ, ಬಾಬು ಜಗಜೀವನ್ ರಾಮ್‌ರವರ ಪುಣ್ಯ ಸ್ಮರಣೆ ಕಾರ್ಯಕ್ರಮ




ರಾಯಚೂರು: ಇಂದು ದಿನಾಂಕ 6 ಜುಲೈ 2024 ರಂದು ಬೆಳಿಗ್ಗೆ 9 ಗಂಟೆಗೆ ಹಸಿರು ಕ್ರಾಂತಿಯ ಹರಿಕಾರ ಮತ್ತು ಭಾರತದ ಮಾಜಿ ಉಪ ಪ್ರಧಾನಿಗಳಾದ ಡಾಕ್ಟರ್ ಬಾಬು ಜಗಜೀವನ್ ರಾಮ್ ರವರ ಪುಣ್ಯ ಸ್ಮರಣೆಕಾರ್ಯಕ್ರಮವನ್ನುರಾಯಚೂರು ನಗರದ ಸ್ಟೇಷನ್ ರಸ್ತೆಯಲ್ಲಿರುವ ಡಾಕ್ಟರ್ ಬಾಬು ಜಗಜೀವನ್ ರಾಮ್ ಅವರ ವೃತ್ತದಲ್ಲಿ ಪೂಜಾ ಕಾರ್ಯಕ್ರಮ ಮತ್ತು ಮಾಲಾರ್ಪಣೆ ಮಾಡುವುದರೊಂದಿಗೆ ನೆರವೇರಿಸಲಾಗುವುದು. ತಾವೆಲ್ಲರೂ ಆಗಮಿಸಿ ಕಾರ್ಯಕ್ರಮದಲ್ಲಿ ಭಾಗವಹಿಸ ಬೇಕೆಂದು ತಮ್ಮಲ್ಲಿ ಪ್ರಕಟಣೆ ಮೂಲಕ ಕೋರುತ್ತಿರುವ ಮಹೇಶ್ ಪೋತದಾರ್ ಉಪ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ, ರಾಯಚೂರು.

## ಕಾಮದ ಕಣ್ಣು ಸ್ವಾಭಿಮಾನದ ಹೆಣ್ಣು ಕಿರುಚಿತ್ರದ ಚಾಲನೆ



**ಕೃಷ್ಣರಾಜಪೇಟೆ :** ಪಟ್ಟಣದ ಮಾಧ್ಯಮ ಸ್ಟುಡಿಯೋ ಕಛೇರಿಯ ಜೆ.ಪಿ.ರಾಜು ರವರು "ರಾಜ್ ಪವರ್ ಕ್ರಿಯೇಷನ್ಸ್ ಹಾಗೂ RP9 ನ್ಯೂಸ್" ಬ್ಯಾನರ್ ಅಡಿಯಲ್ಲಿ "ಕಾಮದ ಕಣ್ಣು, ಸ್ವಾಭಿಮಾನದ ಹೆಣ್ಣು" ಶೀರ್ಷಿಕೆಯ ಕಿರುಚಿತ್ರ ನಿರ್ಮಾಣಕ್ಕೆ ಬಿಜಿಎಸ್ ಶಿಕ್ಷಣ ಸಂಸ್ಥೆಯಲ್ಲಿಯ ಆವರಣದಲ್ಲಿರುವ ಪರಮ ಪೂಜ್ಯ ಜಗದ್ಗುರು ಶ್ರೀ ಬಾಲಗಂಗಾಧರನಾಥ ಸ್ವಾಮೀಜಿಗಳ ಪುತ್ಥಳಿಗೆ ಡಾ.ಜೆ.ಎನ್. ರಾಮಕೃಷ್ಣೇಗೌಡರ ಆರ್ಶಿವಾದದೊಂದಿಗೆ , ಸಮಾಜ ಸೇವಕರಾದ ಕೆಬಿಸಿ ಮಂಜುನಾಥ್ ರವರ ಸಹಕಾರದೊಂದಿಗೆ ಪೂಜೆ ಸಲ್ಲಿಸಿ ಮಾಲಾರ್ಪಣೆ ಮಾಡಿ ಕಿರುಚಿತ್ರದ ಮುಹೂರ್ತಕ್ಕೆ ಚಾಲನೆ ಮಾಡಲಾಯಿತು,_ ನಂತರ ಮಾತನಾಡಿದ ಡಾ.ಜೆ.ಎನ್. ರಾಮಕೃಷ್ಣೇಗೌಡರು ಕೆ.ಆರ್.ಪೇಟೆ ಪಟ್ಟಣದಲ್ಲಿ ಮಾಧ್ಯಮ ಸ್ಟುಡಿಯೋ ಕಛೇರಿಯಲ್ಲಿರುವ ಸ್ನೇಹಿತರು ಹಲವಾರು ಸಣ್ಣ-ಪುಟ್ಟ ಕಾರ್ಯಕ್ರಮ ಮಾಡುತ್ತಿದ್ದು ಎಲ್ಲರ ಸಹಕಾರದಿಂದ ರಾಜು.ಜೆ.ಪಿ ರವರು ತಾಲ್ಲೋಕಿನ ಪ್ರತಿಭೆಗಳಿಗೆ ಅವಕಾಶ ಕಲ್ಪಿಸಿಕೊಡುವ ಉದ್ದೇಶದಿಂದ "ಕಾಮದ ಕಣ್ಣು ಸ್ವಾಭಿಮಾನದ ಹೆಣ್ಣು" ಎಂಬ ಕಿರುಚಿತ್ರ ನಿರ್ಮಾಣಕ್ಕೆ ಪರಮ ಪೂಜ್ಯ ಶ್ರೀ ಬಾಲಗಂಗಾಧರನಾಥ ಸ್ವಾಮೀಜಿಗಳ ಆರ್ಶಿವಾದದೊಂದಿಗೆ ಶುಭ ಗಳಿಗೆಯಲ್ಲಿ ಚಾಲನೆ ಮಾಡಿದ್ದು ಯಾವುದೇ ವಿಘ್ನಗಳು ಬಾರದೇ ಚಿತ್ರಿಕರಣ ಸುಗಮವಾಗಿ ಸಾಗಲೆಂದು ಹಾರೈಸಿದರು.

ಈ ಸಂದರ್ಭದಲ್ಲಿ ಬಿಜಿಎಸ್ ಶಿಕ್ಷಣ ಸಂಸ್ಥೆಯ ಪ್ರಧಾನ ಕಾರ್ಯದರ್ಶಿಗಳಾದ ಡಾ.ಜೆ.ಎನ್. ರಾಮಕೃಷ್ಣೇಗೌಡರು,ಸಮಾಜ ಸೇವಕರಾದ ಕೆಬಿಸಿ ಮಂಜುನಾಥ್, ರೈತಸಂಘದ ಮರುವನಹಳ್ಳಿ ಶಂಕರ್, ಸೈಯದ್ ಖಲೀಲ್,ಮಾಧ್ಯಮ ಸ್ಟುಡಿಯೋ ಕಛೇರಿಯ ರಾಜು.ಜೆ.ಪಿ, ಹೊಸಹೊಳಲು ಶ್ರೀನಿವಾಸ್, ಸಾಯಿಕುಮಾರ್,ಮಾಕವಳ್ಳಿ ರಂಗನಾಥ್, ಲೋಕೇಶ್.ವಿ, ಬಿಜಿಎಸ್ ಶಿಕ್ಷಣ ಸಂಸ್ಥೆಯ ಶಿಕ್ಷಕಿ ವೃಂದದವರು ನೆರೆದಿದ್ದರು,

## ಜಿಲ್ಲಾ 11 ನೇ ಕನ್ನಡ ಸಾಹಿತ್ಯ ಸಮ್ಮೇಳನದ ನಿರ್ಣಯಗಳು

**ರಾಮ ಮನಗೂಳಿ ವೇದಿಕೆ (ಬಾಗಲಕೋಟೆ) :** ನವನಗರದ ಡಾ.ಬಿ.ಆರ್. ಅಂಬೇಡ್ಕರ ಭವನದಲ್ಲಿ ಎರಡು ದಿನಗಳ ವರೆಗೆ ನಡೆದ ಬಾಗಲಕೋಟೆ ಜಿಲ್ಲಾ 11 ನೇ ಕನ್ನಡ ಸಾಹಿತ್ಯ ಸಮ್ಮೇಳನದ ಬಹಿರಂಗ ಅದಿವೇಶನದಲ್ಲಿ ಜಿಲ್ಲೆಯ ಇತಿಹಾಸ ಪರಂಪರೆಯನ್ನು ಬಿಂಬಿಸುವ ರಾಷ್ಟ್ರೀಯ ಚಾಲುಕ್ಯ ಉತ್ಸವ, ರನ್ನ ಉತ್ಸವ ನಿಂತು ಹೋಗಿದ್ದು ಅವುಗಳನ್ನು ಇದೇ ವರ್ಷ ಆರಂಭಿಸುವುದು ಸೇರಿದಂತೆ 11 ಬೇರೆ ಬೇರೆ ವಿಷಯಗಳ ನಿರ್ಣಾಯ ತೆಗೆದುಕೊಂಡಿದೆ.

ಕಸಾಪ ಜಿಲ್ಲಾಧ್ಯಕ್ಷ ಶಿವಾನಂದ ಶೆಲ್ಲಿಕೇರಿ ಅಧ್ಯಕ್ಷತೆಯಲ್ಲಿ ನಡೆದ ಬಹಿರಂಗ ಅಧಿವೇಶನದಲ್ಲಿ ಪರಿಷತ್ ಗೌರವ ಕಾರ್ಯದರ್ಶಿ ಡಾ.ಚಂದ್ರಶೇಖರ ಕಾಳನ್ನವರ ಅವರು ನಿರ್ಣಯ ಮಂಡನೆ ಮಾಡಿದರು. ಜಿಲ್ಲಾ ಕೋಶಾಧ್ಯಕ್ಷ ಸಿ.ಎಂ.ಜೋಶಿ ಅವರು ಅನುಮೋದಿಸಿದರು.

**ನಿರ್ಣಯಗಳು :**

* ಹಲವು ವರ್ಷಗಳಿಂದ ಜಿಲ್ಲೆಯ ವೈಭವಯುತ ಕನ್ನಡ ಸಂಸ್ಕೃತಿ ಮತ್ತು ಸಾಹಿತ್ಯ ಪರಂಪರೆಯನ್ನು ಬಿಂಬಿಸುವ ರಾಷ್ಟ್ರೀಯ ಚಾಲುಕ್ಯ ಉತ್ಸವ ಮತ್ತು ರನ್ನ ಉತ್ಸವ ನಿಂತೇ ಹೋಗಿದ್ದು, ಅವುಗಳನ್ನು ಇದೇ ವರ್ಷದಿಂದ ಆರಂಭಿಸಬೇಕೆಂದು ಸಮ್ಮೇಳನವು ಸರ್ಕಾರಕ್ಕೆ ಒತ್ತಾಯಿಸುತ್ತದೆ.
* ವಿಶ್ವವಿದ್ಯಾಲಯ ಮತ್ತು ಪದವಿ ಕಾಲೇಜುಗಳಲ್ಲಿ ಕನ್ನಡ ವಿಷಯದ ಕಾರ್ಯಭಾರ ಕಡಿಮೆ ಮಾಡಿದ್ದು ಅದನ್ನು ಮೊದಲಿನಂತೆ ಮುಂದುವರಿಸಲು ಸಮ್ಮೇಳನವು ಒತ್ತಾಯಿಸುತ್ತದೆ.
* ಕೃಷ್ಣಾ ಮೇಲ್ದಂಡೆ ಯೋಜನೆಯ 3 ನೇ ಹಂತವನ್ನು ಶೀಘ್ರದಲ್ಲಿ ಪೂರ್ಣಗೊಳಿಸಬೇಕೆಂದು ಸಮ್ಮೇಳನವು ಆಗ್ರಹಿಸುತ್ತದೆ.
* ಬಾಗಲಕೋಟೆ ನವನಗರದ 2 ನೇ ಯುನಿಟ್‌ದಲ್ಲಿ ಈಗಾಗಲೇ ಜನವಸತಿ ಬಂದು ನೆಲೆಸಿದ್ದು ಅಲ್ಲಿ ಸರಕಾರಿ ಪ್ರಾಥಮಿಕ, ಪ್ರೌಢಶಾಲೆ, ಮತ್ತು ವಿಶೇಷವಾಗಿ ಪದವಿಪೂರ್ವ ಕಾಲೇಜು ಆರಂಭಿಸಿ, ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡುವುದು.
* ಸರ್ಕಾರದ ಸಾಹಿತ್ಯಿಕ, ಸಾಂಸ್ಕೃತಿಕ ಸಂಸ್ಥೆಗಳಲ್ಲಿ ನೇಮಿಸುವ ಪದಾಧಿಕಾರಿಗಳು ಹಾಗೂ ದೇಶ ವಿದೇಶದ ಸಾಂಸ್ಕೃತಿಕ ಸಮ್ಮೇಳನಗಳಲ್ಲಿ ಕಲಾವಿದರು, ಸಾಹಿತಿಗಳು ಆಯ್ಕೆಯಲ್ಲಿ ಉತ್ತರ ಕರ್ನಾಟಕ ಅದರಲ್ಲೂ ನಮ್ಮ ಬಾಗಲಕೋಟೆ ಜಿಲ್ಲೆಯ ವಂಚಿತವಾಗಿದ್ದು ಈ ತಾರತಮ್ಯವನ್ನು ನಿವಾರಿಸಬೇಕೆಂದು ಆಗ್ರಹಿಸತ್ತೇವೆ.
* ಬಾಗಲಕೋಟೆ ಜಿಲ್ಲೆಯಲ್ಲಿರುವ ರಾಜ್ಯ ಬಯಲಾಟ ಅಕಾಡೆಮಿಯು ತನ್ನ ಕಾರ್ಯವನ್ನು ಚುರುಕುಗೊಳಿಸಬೇಕೆಂದು ಮತ್ತು ಸ್ಥಗಿತವಾಗಿರುವ ರನ್ನ ಪ್ರತಿಷ್ಠಾನ ಹಾಗೂ ಪಿ.ಬಿ.ದುತ್ತರಗಿ ಪ್ರತಿಷ್ಠಾನದ ಕೆಲಸಗಳನ್ನ ಚುರುಕುಗೊಳಿಸಬೇಕೆಂದು ಸಮ್ಮೇಳನವು ಆಗ್ರಹಿಸುತ್ತದೆ.
* ಆಲಮಟ್ಟಿ ಹಿನ್ನಿರಿನ ಪ್ರದೇಶಗಳಲ್ಲಿ ಪ್ರವಾಸೋದ್ಯಮವನ್ನು ಪ್ರೋತ್ಸಾಹಿಸಲು ಹಾಗೂ ಅಭಿವೃದ್ಧಿಪಡಿಸಲು ಯೋಜನಗಳನ್ನು ರೂಪಿಸಿಕೊಂಡು ಅನುಷ್ಠಾನಗೊಳಿಸಬೇಕೆಂದು ಆಗ್ರಹಿಸಯತ್ತೇವೆ.
* ಬಾಗಲಕೋಟೆ ಜಿಲ್ಲೆಯ ನೀರಾವರಿ ವಂಚಿತ ಪ್ರದೇಶಗಳಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸುವ ಹಾಗೂ ಅಂತರ್ಜಲ ಮಟ್ಟವನ್ನು ಹೆಚ್ಚಿಸುವ ಸಲವಾಗಿ ಈ ಪ್ರದೇಶದಲ್ಲಿರುವ ಎಲ್ಲಾ ಕರೆಗಳನ್ನು ಪುನರುಜ್ಜೀವನಗೊಳಿಸಿ ನೀರು ತುಂಬಿಸುವ ಯೋಜನೆಯು ತಕ್ಷಣ ಕಾರ್ಯರೂಪಕ್ಕೆ ತರಬೇಕು.
* ಬಾಗಲಕೋಟೆ ಜಿಲ್ಲೆಯ ಗುಳೇದಗುಡ್ಡ, ಹುನಗುಂದ, ಇಳಕಲ್ಲ, ಬೀಳಗಿ, ಜಮಖಂಡಿ ಹಾಗೂ ರಬಕವಿ-ಬನಹಟ್ಟಿ ತಾಲೂಕ ಕೇಂದ್ರಗಳನ್ನು ಸಾಹಿತ್ಯಿಕ ಸಾಂಸ್ಕೃತಿಕ ಕಾರ್ಯಚಟುವಟಿಕೆಗಳು ನಡೆಯಲು ಕನ್ನಡ ಸಾಹಿತ್ಯ ಪರಿಷತ್ತು ಭವನಗಳನ್ನು ನಿರ್ಮಿಸಲು ನಿವೇಶನಗಳನ್ನು ಒದಗಿಸಬೇಕೆಂದು ಹಕ್ಕೋತ್ತಾಯವನ್ನು ಮಂಡಿಸುತ್ತಿದ್ದೇವೆ.
* 1 ರಿಂದ 5 ನೇ ತರಗತಿ ವರಗಿನ ಎಲ್ಲಾ ಮಕ್ಕಳಿಗೆ ಕಡ್ಡಾಯವಾಗಿ ಕನ್ನಡ ಮಾಧ್ಯಮದಲ್ಲಿಯೇ ಶಿಕ್ಷಣ ನೀಡಬೇಕು. ಸಂಖ್ಯಾ ಕೊರತೆಯಿರುವ ಕನ್ನಡ ಮಾಧ್ಯಮದ ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು ಮುಚ್ಚದಂತೆ ಸರ್ಕಾರವು ನಿರ್ಧಾರ ತೆಗೆದುಕೊಳ್ಳಬೇಕು.
* ಬಾಗಲಕೋಟೆ ಪಟ್ಟಣದ ನವನಗರದ ಡಾ.ಬಿ.ಆರ್.ಅಂಬೇಡ್ಕರ ಭವನದಲ್ಲಿ ಬಾಗಲಕೋಟೆ ಜಿಲ್ಲಾ 11 ನೇ ಕನ್ನಡ ಸಾಹಿತ್ಯ ಸಮ್ಮೇಳನವುನ ಯಶಸ್ವಿಯಾಯಿತು. ಈ ಸಮ್ಮೇಳನದ ಯಶಸ್ವಿಗೆ ಶ್ರಮಿಸಿದ ಸ್ವಾಗತ ಸಮಿತಿ, ಕನ್ನಡ ಪರ ಮನಸ್ಸುಗಳು, ವಿವಿಧ ಕನ್ನಡ ಪರ ಸಂಘಟನೆಗಳು, ಶಿಕ್ಷಕರ ಸಂಘಟನೆಗಳು, ಸರಕಾರಿ ನೌಕರರ ಸಂಘಟನೆಗಳು, ಶಿಕ್ಷಣ ಸಂಸ್ಥೆಗಳು, ವಿದ್ಯಾರ್ಥಿಗಳು, ಸರ್ಕಾರದ ಎಲ್ಲಾ ಇಲಾಖೆಗಳ, ಮಾಧ್ಯಮ ಮಿತ್ರರು, ಹಾಗೂ ಬಾಗಲಕೋಟೆ ತಾಲೂಕ ಕಸಾಪ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಜಿಲ್ಲೆಯ ಕಸಾಪದ ಅಜೀವ ಸದಸ್ಯರಿಗೆ ಕೃತಜ್ಞತೆಗಳು ಸಲ್ಲಿಸಬೇಕೆಂದು ಸರ್ವಾನುಮತದಿಂದ ನಿರ್ಣಯಿಸಲಾಯಿತು.

## ನೆಪ ಮಾತ್ರದ ಜನತಾ ದರ್ಶನ ಈಡೇರದ ಬೇಡಿಕೆ ಸಾರ್ವಜನಿಕರಿಂದ ಭಿನ್ನ ನಿಲುವು





**ವಿಜಯನಗರ ಜಿಲ್ಲೆಯ ಕೊಟ್ಟೂರು :** ತಾಲೂಕಿನ ಕೊಟ್ಟೂರು ಪಟ್ಟಣದಲ್ಲಿ ದಿನಾಂಕ 5 ಜುಲೈ 2024 ರಂದು ಜನತಾ ದರ್ಶನ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾನ್ಯ ಜಿಲ್ಲಾಧಿಕಾರಿಗಳಾದ ಎಂ.ಎಸ್. ದಿವಾಕರ ಮತ್ತು ಶಾಸಕರಾದ ಕೆ ನೇಮಿರಾಜ್ ನಾಯಕ್ ವಿಧಾನ ಸಭಾ ಕ್ಷೇತ್ರದ ಇವರ ಘನ ಉಪಸ್ಥಿತಿಯಲ್ಲಿ ಎಪಿಎಂಸಿ ಆವರಣದಲ್ಲಿ ಜನತಾ ದರ್ಶನ ಕಾರ್ಯಕ್ರಮ ಕುಂಡಲಕ್ಕೆ ನೀರು ಹಾಕುವುದರ ಮೂಲಕ ಚಾಲನೆ ನೀಡಿ-ದರು. ಈ ಕಾರ್ಯಕ್ರಮ ಇವರ ಉಪಸ್ಥಿತಿಯಲ್ಲಿ ಎರಡನೇ ಬಾರಿ ನಡೆಯುತ್ತಿರುವುದು ಆದರೆ ಕೆಲ ಸಾರ್ವಜನಿಕರಿಗೆ ಬೇಸರ ವಾಗಿದೆಯಂತೆ ಅಲ್ಲಲ್ಲಿ ಮಾತನಾಡಿ ಕೊಳ್ಳುತ್ತಿದ್ದರು. ಏಕೆ-ಂದರೆ ಮೊದಲನೇ ಜನತಾ ದರ್ಶನದ ಕಾರ್ಯಕ್ರಮದಲ್ಲಿ ಸ್ವೀಕರಿಸಿದ ಅರ್ಜಿಗಳು ಕೆಲವೇ ಕೆಲವು ಸಾರ್ವಜನಿಕರಿಗೆ ಅನುಕೂಲ ವಾಗಿವೆಯಂತೆ ಆದರೆ ಇನ್ನು ಆದರೂ ಅನೇಕ ಅರ್ಜಿಗಳು ಕೇವಲ ನೆಪ ಮಾತ್ರಕ್ಕೆ ತೆಗೆದು ಕೊಂಡಿದ್ದಾರೆ ಎಂದು ಕೆಲವರು ಬೇಸರ ವ್ಯಕ್ತಪಡಿಸುತ್ತಾ ಮತ್ತೆ ಅರ್ಜಿಗಳನ್ನು ನೀಡುತ್ತಿದ್ದರಂತೆ ಹೀಗಾಗಿ ಕೆಲ ಸಾರ್ವಜನಿಕರ ಮನಸ್ಥಿತಿಗೆ ಅನುಗುಣವಾಗಿ ಅಧಿಕಾರಿಗಳಾಗಲಿ ಜನನಾಯಕರಾಗಲಿ ಕೆಲಸ ಮಾಡಿ ಕೊಡುವುದು ಇಲ್ಲಿನ ಸಾರ್ವಜನಿಕರ ಬೇಡಿ-ಕೆಯಾಗಿದೆ. ನೂತನ ಕೊಟ್ಟೂರು ತಾಲೂಕು ಆದರು ಅನೇಕ ಕಚೇರಿಗಳು ತೆರೆದಿಲ್ಲ ಮತ್ತು ಅತ್ಯ ಅವಶ್ಯಕವಾಗಿರುವ ಬಸ್ಟ್ಯಾಂಡ್ ಆಗುತ್ತೆ ಮಾಡೋಣ ಎನ್ನುತ್ತಲೇ ಬಂದಿದ್ದಾರೆ ಹಾಗೇನೆ ಸರ್ಕಾರಿ ಆಸ್ಪತ್ರೆ ಸಮಸ್ಯೆಗಳು ಯಾವಾಗ ಬಗೆ ಹರಿವುದು ಎಂಬುದು ಸಾರ್ವಜನಿಕರ ಕೆಲ ಮುಖಂಡರ ಪ್ರಶ್ನೆ ಪ್ರಶ್ನೆಯಾಗಿಯೇ ಉಳಿದಿವೆ. ಈ ಒಂದು ಸಂದರ್ಭದಲ್ಲಿ ಎರಡನೇ ಬಾರಿ ಜನತಾದರ್ಶನದಕಾರ್ಯಕ್ರಮದಲ್ಲಿಬಂದಂತ ಅರ್ಜಿಗಳು ಆಹಾರ-3, ಕಂದಾಯ-61 , ಪಶುಪಾಲನೆ -1 , ಭೂಮಾಪನ -3, ಸಾರಿಗೆ- 3 , ಪಟ್ಟಣ ಪಂಚಾಯಿತಿ-19, ಎಪಿಎಂಸಿ -ಆರೋಗ್ಯ- 1 ಸಿಡಿಪಿಓ -4 , ಪಂಚಾಯಿತಿ-10, ಜೆಸ್ಕಾಂ- ತೋಟಗಾರಿಕೆ -1, ಶಿಕ್ಷಣ-2, ಕೃಷಿ-12 ಒಟ್ಟು - 125 ಸ್ಥಳದಲ್ಲೇ ವಿಲೇ -12 ಬಾಕಿ- 113 ಅರ್ಜಿಗಳು ಬಂದಿವೆಯಂತೆ ಆದರೆ ಇದರಲ್ಲಿ ಎಷ್ಟು ಅರ್ಜಿಗಳಿಗೆ ನ್ಯಾಯ ಸಿಗಬಹುದು ಎಂಬುದು ಇಲ್ಲಿನ ಸಾರ್ವಜನಿಕರ ಪ್ರಶ್ನೆಯಾಗಿದೆ? ಇದ-ಕ್ಕೆ ಉತ್ತರ ಮುಂದಿನ ದಿನಗಳಲ್ಲಿ ಯಾವ ರೀತಿ ಅಧಿಕಾರಿಗಳು ನೀಡುತ್ತಾರೆ ಇದ-ಕ್ಕೆ ಜಿಲ್ಲಾಧಿಕಾರಿಗಳ ಕಾರ್ಯಕ್ರಮ ಹೇಗೆ ನಡೆಯುತ್ತದೆ. ಎಂಬುದು ಮುಂದಿನ ದಿನ ಮಾನಗಳಲ್ಲಿ ನೋಡುವುದು ಸೂಕ್ತ ಎಂದು ಸಾರ್ವಜನಿಕರ ಅಭಿಪ್ರಾಯವಾಗಿದೆ.

ಈ ಸಂದರ್ಭದಲ್ಲಿ ನೋಂಗ್ಜಾಯ್ ಮೊಹಮ್ಮದ್ ಅಲಿ ಅಕ್ರಮ್ ಶಾ ಉಪ ವಿಭಾಗಾಧಿಕಾರಿಗಳು ಸಲೀಂ ಪಾಶಾ ಎಸ್ ಪಿ ಮತ್ತು ದಂಡಾಧಿಕಾರಿಗಳಾದ ಜಿಕೆ ಅಂಬರೀಶ್ ರವಿಕುಮಾರ್ ಕಾರ್ಯ ನಿರ್ವಾಹಕ ಅಧಿಕಾರಿಗಳು ಹಾಗೂ ತಾಲೂಕಿನ ಎಲ್ಲಾ ಅಧಿಕಾರಿಗಳು ಹಾಗೂ ಪೊಲೀಸ್ ಸಿಬ್ಬಂದಿ ವರ್ಗದವರು ರೈತ ಮುಖಂಡರು ಸಂಘ ಸಂಸ್ಥೆಯ ಮುಖಂಡರುಗಳು ಸಾರ್ವಜನಿಕರು ಅನೇಕರು ಉಪಸ್ಥಿತರಿದ್ದರು.

**ತಾಲೂಕ ವರದಿಗಾರರು ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಪ್ರದೀಪ್ ಕುಮಾರ್ ಸಿ ಕೊಟ್ಟೂರು**



**ಇಳಕಲ್: ತಾಲೂಕಿನ ಚಿಕ್ಕಕೊಡಗಲಿ ಗ್ರಾಮದ ಕೆರೆ ಅಭಿವೃದ್ಧಿ ಕಾಮಗಾರಿಗೆ ಇಂದು ಚಾಲನೆ ನೀಡಿ ಮಾತನಾಡಿದ ಶಾಸಕರು ಹಾಗೂ ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ಮಂಡಳಿ ಅಧ್ಯಕ್ಷರಾದ ವಿಜಯಾನಂದ ಎಸ್ ಕಾಶಪ್ಪನವರ ನಂದವಾಡಗಿ ಏತನೀರಾವರಿ ವತಿಯಿಂದ ಚಿಕ್ಕ ಕೊಡಗಲಿ ಹಾಗೂ ಬಲಕುಂದಿ ಕೆರೆಗಳ ಪುನಶ್ಚೇತನಕ್ಕೆ ಚಾಲನೆ ದೊರೆಯಲಿದೆ ಎಂದು ಹೇಳಿದರು.ಸಣ್ಣ ನೀರಾವರಿ ಹಾಗೂ ಅಂತರ್ಜಲ ಅಭಿವೃದ್ಧಿ ಇಲಾಖೆ ವತಿಯಿಂದ ಚಿಕ್ಕ ಕೊಡಗಲಿ ಗ್ರಾಮದಲ್ಲಿ 50 ಲಕ್ಷ ರೂಪಾಯಿ ಯೋಜನೆಯ ಕಾಮಗಾರಿಗೆ ಗುದ್ದಲಿ ಪೂಜೆ ನೇರವೇರಿಸಿ ಮಾತನಾಡಿದರು.ಈ ಸಂದರ್ಭದಲ್ಲಿ ಭದ್ರಪ್ಪ ಶೆಟ್ಟರ್, ಮಹಾಲಿಂಗಪ್ಪ ಭದ್ರಶೆಟ್ಟಿ,ಕಲ್ಲಪ್ಪ ಸೇರಿದಂತೆ ಗ್ರಾಮ ಪಂಚಾಯತ್ ಸದಸ್ಯರು, ಗ್ರಾಮದ ಮುಖಂಡರು,ನೀರಾವರಿ ಇಲಾಖೆ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.**

## ಕೊಪ್ಪಳ ಜಿಲ್ಲೆಗೆ ನೂತನ ಎಸ್‌ಪಿ ಡಾ. ರಾಮ್ ಎಲ್ ಅರಸಿದ್ದಿ ನೇಮಕ



**ಕೊಪ್ಪಳ :** ಜಿಲ್ಲೆಯಲ್ಲಿ ಕಳೆದ ಸುಮಾರು ಎರಡು ವರ್ಷಗಳಿಂದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯಾಗಿ ಕಾರ್ಯನಿರ್ವಹಿಸುತ್ತಿದ್ದ ಯಶೋಧ ಒಂಟಗೋಡಿ ಅವರನ್ನು ಸರ್ಕಾರ ಇಲ್ಲಿಂದ ವರ್ಗಾವಣೆ ಮಾಡಿ ಅವರ ಜಾಗ-ಕ್ಕೆ ನೂತನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾಗಿ ಡಾ ರಾಮ್ ಎಲ್ ಅರಸಿದ್ದಿ ಅವರನ್ನು ನೇಮಕ ಮಾಡಿ ಆದೇಶ ಹೊರಡಿಸಿದೆ

ಡಾ, ರಾಮ್ ಎಲ್ ಅರಸಿದ್ಧಿ ಯವರು ಕೊಪ್ಪಳ ದ ನೂತನ ಎಸ್ಪಿ ಆಗಿ ಜಿಲ್ಲೆಯಲ್ಲಿ ಪೊಲೀಸ ಕಾರ್ಯ ನಿರ್ವಹಿಸಲಿದ್ದಾರೆ ಶೀಘ್ರವರು ಜಿಲ್ಲೆಗೆ ಆಗಮಿಸಿ ಅಧಿಕಾರ ಸ್ವೀಕರಿಸಲಿದ್ದಾರೆ ಎಂದು ಹೇಳಲಾಗಿದೆ.

# “ಕಣ್ಮರೆಯಾದ ಎನ್.ಇ.ಪಿ. ಶಿಕ್ಷಣ ನೀತಿ–ಆಯೋಗ”

2019 ರಲ್ಲಿ, ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯವು ಕರಡು ಹೊಸ ಶಿಕ್ಷಣ ನೀತಿಯನ್ನು ಬಿಡುಗಡೆ ಮಾಡಿತ್ತು , ಅದರ ನಂತರ ಹಲವಾರು ಸಾರ್ವಜನಿಕ ಸಮಾಲೋಚನೆಗಳು ನಡೆದವು. ಕರಡು ಎನ್ಇಪಿ (NEP-National Education Policy) ಯೋಜನೆಯು ಅಗತ್ಯ ಕಲಿಕೆ, ವಿಮರ್ಶಾತ್ಮಕ ಚಿಂತನೆ ಮತ್ತು ಹೆಚ್ಚು ಸಮಗ್ರ ಅನುಭವ, ಚರ್ಚಾ–ಆಧಾರಿತ ಮತ್ತು ವಿಶ್ಲೇಷಣೆ ಆಧಾರಿತ ಕಲಿಕೆಯನ್ನು ಹೆಚ್ಚಿಸಲು ಹಾಗೂ ಪಠ್ಯಕ್ರಮದ ವಿಷಯವನ್ನು ಕಡಿಮೆ ಮಾಡುವ ಯೋಜನೆಯನ್ನು ಚರ್ಚಿಸುತ್ತದೆ. ಮಕ್ಕಳ ಅರಿವಿನ ಬೆಳವಣಿಗೆಯ ಆಧಾರದ ಮೇಲೆ ವಿದ್ಯಾರ್ಥಿಗಳಿಗೆ ಕಲಿಕೆಯನ್ನು ಉತ್ತಮಗೊಳಿಸುವ ಪ್ರಯತ್ನದಲ್ಲಿ ಪಠ್ಯಕ್ರಮ ಮತ್ತು ಶಿಕ್ಷಣ ರಚನೆಯನ್ನು 10 + 2 ವ್ಯವಸ್ಥೆಯಿಂದ 5 + 3 + 3 + 4 ವ್ಯವಸ್ತೆಯ ವಿನ್ಯಾಸಕ್ಕೆ ಪರಿಷ್ಕರಿಸುವ ಬಗ್ಗೆಯೂ ಇದು ಹೇಳುತ್ತದೆ. ಅಸ್ತಿತ್ವದಲ್ಲಿರುವ ಭಾರತೀಯ ಶಿಕ್ಷಣ ವ್ಯವಸ್ಥೆಯಲ್ಲಿ ಹಲವಾರು ಬದಲಾವಣೆಗಳನ್ನು ಜಾರಿತರುವ ಉದ್ದೇಶದಿಂದ 2020 ರ ಜುಲೈ 29 ರಂದು ಕ್ಯಾಬಿನೆಟ್ ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಅಂಗೀಕರಿಸಿತು. ಹೊಸ ನೀತಿಯು ಹಿಂದಿನ ರಾಷ್ಟ್ರೀಯ ಶಿಕ್ಷಣ ನೀತಿ, 1986 ಅನ್ನು ಬದಲಾಯಿಸುತ್ತದೆ. ಈ ನೀತಿಯು ಪ್ರಾಥಮಿಕ ಶಿಕ್ಷಣವನ್ನು ಉನ್ನತ ಶಿಕ್ಷಣಕ್ಕೆ ಮತ್ತು ಗ್ರಾಮೀಣ ಮತ್ತು ನಗರ ಭಾರತದಲ್ಲಿ ವೃತ್ತಿಪರ ತರಬೇತಿಗೆ ಸಮಗ್ರ ಚೌಕಟ್ಟಾಗಿದೆ. ಈ ನೀತಿಯು 2040 ರ ವೇಳೆಗೆ ಭಾರತದ ಶಿಕ್ಷಣ ವ್ಯವಸ್ಥೆಯನ್ನು ಪರಿವರ್ತಿಸುವ ಗುರಿಯನ್ನು ಹೊಂದಿದೆ.

**(ಶಾಲಾ – ಕಾಲೇಜುಗಳಲ್ಲಿ ಪರಿಣಾಮಕಾರಿ ಬೋಧನೆ)**

ಈಗಿರುವ "10 + 2" ರಚನೆಯನ್ನು "5 + 3 + 3 + 4" ಮಾದರಿಯೊಂದಿಗೆ ಬದಲಾಯಿಸಲಾಗುತ್ತದೆ. ಇದನ್ನು ಈ ಕೆಳಗಿನಂತೆ ಕಾರ್ಯಗತಗೊಳಿಸಲಾಗುತ್ತದ.

1] ಅಡಿಪಾಯ ಹಂತ: ಇದನ್ನು ಮತ್ತಷ್ಟು ಎರಡು ಭಾಗಗಳಾಗಿ ವಿಂಗಡಿಸಲಾಗಿದೆ: 3 ವರ್ಷಗಳ ಪ್ರಿಸ್ಕೂಲ್ ಅಥವಾ ಅಂಗನವಾಡಿ, ನಂತರ ಪ್ರಾಥಮಿಕ ಶಾಲೆಯಲ್ಲಿ 1 ಮತ್ತು 2 ತರಗತಿಗಳು. ಇದು 3–8 ವರ್ಷದ ಮಕ್ಕಳನ್ನು ಒಳಗೊಳ್ಳುತ್ತದೆ. ಅಧ್ಯಯನದ ಗಮನವು ಚಟುವಟಿಕೆ ಆಧಾರಿತ ಕಲಿಕೆಯಲ್ಲಿರುತ್ತದೆ.

2] ಪೂರ್ವಸಿದ್ಧತಾ ಹಂತ: 3 ರಿಂದ 5 ನೇ ತರಗತಿಗಳು, ಇದು 8–11 ವರ್ಷ ವಯಸ್ಸಿನವರನ್ನು ಒಳಗೊಂಡಿರುತ್ತದೆ. ಇದು ಕ್ರಮೇಣ ಮಾತನಾಡುವುದು, ಓದುವುದು, ಬರೆಯುವುದು, ದೈಹಿಕ ಶಿಕ್ಷಣ, ಭಾಷೆಗಳು, ಕಲೆ, ವಿಜ್ಞಾನ ಮತ್ತು ಗಣಿತದಂತಹ ವಿಷಯಗಳನ್ನು ಪರಿಚಯಿಸುತ್ತದೆ.


3] ಮಧ್ಯ ಹಂತ: 6 ರಿಂದ 8 ನೇ ತರಗತಿಗಳು, 11–14 ವರ್ಷದೊಳಗಿನ ಮಕ್ಕಳನ್ನು ಒಳಗೊಳ್ಳುತ್ತದೆ. ಇದು ಗಣಿತ, ವಿಜ್ಞಾನ, ಸಾಮಾಜಿಕ ವಿಜ್ಞಾನ, ಕಲೆ ಮತ್ತು ಮಾನವಿಕ ವಿಷಯಗಳಲ್ಲಿ ಹೆಚ್ಚು ಅಮೂರ್ತ ಪರಿಕಲ್ಪನೆಗಳನ್ನು ವಿದ್ಯಾರ್ಥಿಗಳಿಗೆ ಪರಿಚಯಿಸುತ್ತದೆ.

4] ದ್ವಿತೀಯ ಹಂತ: 9 ರಿಂದ 12 ನೇ ತರಗತಿಗಳು, 14–18 ವರ್ಷ ವಯಸ್ಸಿನವರು. ಇದನ್ನು ಮತ್ತೆ ಎರಡು ಭಾಗಗಳಾಗಿ ವಿಂಗಡಿಸಲಾಗಿದೆ: 9 ಮತ್ತು 10 ನೇ ತರಗತಿಗಳು ಮೊದಲ ಹಂತವನ್ನು ಒಳಗೊಂಡಿದ್ದರೆ 11 ಮತ್ತು 12 ನೇ ತರಗತಿಗಳು ಎರಡನೇ ಹಂತವನ್ನು ಒಳಗೊಂಡಿವೆ. ಈ 4 ವರ್ಷಗಳ ಅಧ್ಯಯನವು ಆಳ ಮತ್ತು ವಿಮರ್ಶಾತ್ಮಕ ಚಿಂತನೆಯೊಂದಿಗೆ "ಮಲ್ಟಿಡಿಸಿಪ್ಲಿನರಿ" (ವೈವಿಧ್ಯಪೂರ್ಣ) ಅಧ್ಯಯನವನ್ನು ಪ್ರಚೋದಿಸಲು ಉದ್ದೇಶಿಸಿದೆ. ವಿಷಯಗಳ ಬಹು ಆಯ್ಕೆಗಳನ್ನು ಒದಗಿಸಲಾಗುವುದು.

5 ] ಪ್ರತಿ ಶೈಕ್ಷಣಿಕ ವರ್ಷದಲ್ಲಿ ಪರೀಕ್ಷೆಗಳು ನಡೆಯುವ ಬದಲು, ಶಾಲಾ ವಿದ್ಯಾರ್ಥಿಗಳು 3, 5 ಮತ್ತು 8 ನೇ ತರಗತಿಗಳಲ್ಲಿ ಕೇವಲ ಮೂರು ಪರೀಕ್ಷೆಗಳಿಗೆ ಉತ್ತರಿಸುತ್ತಾರೆ.

6] ಬೋರ್ಡ್ ಪರೀಕ್ಷೆಗಳನ್ನು 10 ಮತ್ತು 12 ನೇ ತರಗತಿಗಳಿಗೆ ಮುಂದುವರಿಸಲಾಗುವುದು ಆದರೆ ಅದನ್ನು ಮರು ವಿನ್ಯಾಸಗೊಳಿಸಲಾಗುವುದು. ಇದಕ್ಕಾಗಿ ಮಾನದಂಡಗಳನ್ನು ಪರಾಖ್ (ಕಂಖಂಏಉ) ಎಂಬ ಮೌಲ್ಯಮಾಪನ ಸಂಸ್ಥೆ ಸ್ಥಾಪಿಸುತ್ತದೆ. ಅವುಗಳನ್ನು ಸುಲಭಗೊಳಿಸಲು, ಈ ಪರೀಕ್ಷೆಗಳನ್ನು ವರ್ಷಕ್ಕೆ ಎರಡು ಬಾರಿ ನಡೆಸಲಾಗುತ್ತದೆ, ವಿದ್ಯಾರ್ಥಿಗಳಿಗೆ ಎರಡು ಪ್ರಯತ್ನಗಳಿಗೆ ಅವಕಾಶ ನೀಡಲಾಗುತ್ತದೆ. ಪರೀಕ್ಷೆಯು ಎರಡು ಭಾಗಗಳನ್ನು ಹೊಂದಿರುತ್ತದೆ, ಅವುಗಳೆಂದರೆ ವಸ್ತುನಿಷ್ಠ ಮತ್ತು ವಿವರಣಾತ್ಮಕ ಉತ್ತರವಿರುವ ಪ್ರಶ್ನೆಗಳು.

7] ಈ ನೀತಿಯು ವಿದ್ಯಾರ್ಥಿಗಳ ಪಠ್ಯಕ್ರಮದ ಹೊರೆ ಕಡಿಮೆ ಮಾಡುವುದು ಮತ್ತು ಅವರಿಗೆ ಹೆಚ್ಚು "ಅಂತರ–ಶಿಸ್ತು" ಮತ್ತು "ಬಹುಭಾಷಾ" ಆಗಲು ಅನುವು ಮಾಡಿಕೊಡುತ್ತದೆ. ನೀಡಲಾದ ಒಂದು ಉದಾಹರಣೆಯೆಂದರೆ "ಒಬ್ಬ ವಿದ್ಯಾರ್ಥಿಯು ಭೌತಶಾಸ್ತ್ರದೊಂದಿಗೆ ಫ್ಯಾಷನ್




ಅಧ್ಯಯನವನ್ನು ಮಾಡಲು ಬಯಸಿದರೆ, ಅಥವಾ ರಸಾಯನಶಾಸ್ತ್ರದೊಂದಿಗೆ ಬೇಕರಿ ಕಲಿಯಲು ಬಯಸಿದರೆ, ಅವರಿಗೆ ಹಾಗೆ ಮಾಡಲು ಅನುಮತಿಸಲಾಗುವುದು." ವರದಿ ಕಾರ್ಡ್ಗಳು "ಸಮಗ್ರ" ವಾಗಿರುತ್ತವೆ, ಇದರ ಬಗ್ಗೆ ಮಾಹಿತಿಯನ್ನು ನೀಡುತ್ತದೆ.

**ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯ ಸಾರಾಂಶ**

ಮಕ್ಕಳಿಗೆ 5ನೇ ತರಗತಿಯ ವರೆಗೂ ಮಾತೃ ಭಾಷೆ ಅಥವಾ ಪ್ರಾದೇಶಿಕ ಭಾಷೆಯಲ್ಲಿ ಶಿಕ್ಷಣ ನೀಡಬೇಕು.

ಉನ್ನತ ಶಿಕ್ಷಣ ಸಂಸ್ಥೆಗಳು ಹಾಗೂ ವಿಶ್ವವಿದ್ಯಾಲಯಗಳ ಪ್ರವೇಶಕ್ಕೆ ಏಕ ರೂಪ (ಸಾಮಾನ್ಯ) ಪ್ರವೇಶ ಪರೀಕ್ಷೆ ನಡೆಸಲಾಗುತ್ತದೆ.

ಖಾಸಗಿ ಮತ್ತು ಸಾರ್ವಜನಿಕ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ಒಂದೇ ರೀತಿಯ ನಿಯಮಗಳು ಅನ್ವಯವಾಗಲಿವೆ.

ಎಂಫಿಲ್ ಕೋರ್ಸ್ಗಳ ಮುಂದುವರಿಕೆ ಇಲ್ಲ.

ಕಲಿಕೆಯನ್ನು ಅನ್ವಯಿಸುವುದರ ಆಧಾರದ ಮೇಲೆ ಬೋರ್ಡ್ ಎಕ್ಸಾಮ್ಗಳು.

ಪ್ರಾದೇಶಿಕ ಭಾಷೆಗಳಲ್ಲಿ ಇ?ಕೋರ್ಸ್ಗಳ ಅಭಿವೃದ್ಧಿ ಪಡಿಸಲಾಗುತ್ತದೆ. ವರ್ಚುವಲ್ ಲ್ಯಾಬ್ಗಳು, ರಾಷ್ಟ್ರೀಯ ಶೈಕ್ಷಣಿಕ ತಂತ್ರಜ್ಞಾನ ವೇದಿಕೆ (ಎನ್ಇಟಿಎಫ್) ರೂಪಿಸಲಾಗುತ್ತದೆ.

2035ರ ವೇಳೆಗೆ ಶೇ 50ರಷ್ಟು ಹೈಸ್ಕೂಲ್ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಸಿಗುವಂತೆ ಮಾಡುವ ಗುರಿ.

ಎಲ್ಲ ಉನ್ನತ ಶಿಕ್ಷಣಗಳಿಗೆ ಒಂದೇ ನಿಯಂತ್ರಣ ಸಂಸ್ಥೆ ಇರಲಿದೆ.

ಶೈಕ್ಷಣಿಕ, ಆಡಳಿತ ಹಾಗೂ ಹಣಕಾಸು ಸ್ವಾಯತ್ತತೆಯನ್ನು ಶಿಕ್ಷಣ ಸಂಸ್ಥೆಗಳಿಗೆ ನೀಡಲಾಗುತ್ತದೆ. ದೇಶದಲ್ಲಿ ಸುಮಾರು 45,000 ಕಾಲೇಜುಗಳಿಗೆ.

ಪ್ರಸ್ತುತ ಡೀಮ್ಡ್ ಯೂನಿವರ್ಸಿಟಿಗಳು, ಸೆಂಟ್ರಲ್ ಯೂನಿವರ್ಸಿಟಿಗಳು, ಪ್ರತ್ಯೇಕ ಸಂಸ್ಥೆಗಳಿಗೆ ಪ್ರತ್ಯೇಕ ನಿಯಮಾವಳಿಗಳಿವೆ. ಹೊಸ ಶಿಕ್ಷಣ ನೀತಿಯ ಅನ್ವಯ, ಗುಣಮಟ್ಟದ ಕಾರಣಗಳಿಂದ ಎಲ್ಲ ಸಂಸ್ಥೆಗಳಿಗೂ ಒಂದೇ ರೀತಿಯ ನಿಯಮಗಳು ಅನ್ವಯವಾಗಲಿದೆ.

ವಿದ್ಯಾರ್ಥಿಗಳ ಪ್ರಗತಿ ಪತ್ರಗಳಲ್ಲಿ ಕೇವಲ ಅಂಕಗಳು ಹಾಗೂ ಟಿಪ್ಪಣಿಗಳ ಬದಲು ಕೌಶಲ ಹಾಗೂ ಅರ್ಹತೆಗಳ ಸಮಗ್ರಿ ವರದಿ ನೀಡಲಾಗುತ್ತದೆ.

ವೃತ್ತಿ ಆಧಾರಿತ ವಿಷಯಗಳು 6ನೇ ತರಗತಿಗಳ ಪಠ್ಯದೊಂದಿಗೆ ಸಂಯೋಜಿಸಲಾಗುತ್ತದೆ. ಕಲೆ ಮತ್ತು ವಿಜ್ಞಾನದ ರೀತಿ ಪ್ರತ್ಯೇಕಗೊಳಿಸಿದ ಶಿಕ್ಷಣ ವ್ಯವಸ್ಥೆ ಇರುವುದಿಲ್ಲ.

**ಇನ್ನಿತರ ಬದಲಾವಣೆಗಳು**

ಎನ್ಇಪಿ 2020 ರ ಅಡಿಯಲ್ಲಿ, ಹಲವಾರು ಹೊಸ ಶಿಕ್ಷಣ ಸಂಸ್ಥೆಗಳು, ಸಂಸ್ಥೆಗಳು ಮತ್ತು ಪರಿಕಲ್ಪನೆಗಳನ್ನು ರಚಿಸಲು ಶಾಸಕಾಂಗ ಅನುಮತಿಯನ್ನು ನೀಡಲಾಗಿದೆ. ಇದು ಕೆಳಗಿನವುಗಳನ್ನು ಒಳಗೊಂಡಿದೆ

ಭಾರತದ ಪ್ರಧಾನ ಮಂತ್ರಿ ನೇತೃತ್ವದ ರಾಷ್ಟ್ರೀಯ ಶಿಕ್ಷಣ ಆಯೋಗ.

ಅಕಾಡೆಮಿಕ್ ಬ್ಯಾಂಕ್ ಆಫ್ ಕ್ರೆಡಿಟ್, ಮುಂದಿನ ಶಿಕ್ಷಣಕ್ಕಾಗಿ ಸಾಲಗಳನ್ನು ಬಳಸುವುದರ ಮೂಲಕ ಶಿಕ್ಷಣವನ್ನು ಪುನರಾರಂಭಿಸಲು ಸಹಾಯ ಮಾಡುವ ಕ್ರೆಡಿಟ್ಗಳ ಡಿಜಿಟಲ್ ಸಂಗ್ರಹ.

ರಾಷ್ಟ್ರೀಯ ಸಂಶೋಧನಾ ಪ್ರತಿಷ್ಠಾನ: (ಸಂಶೋಧನೆ ಮತ್ತು ನಾವೀನ್ಯತೆಯನ್ನು ಸುಧಾರಿಸಲು).

ವಿಶೇಷ ಶಿಕ್ಷಣ ವಲಯಗಳು: ಅನನುಕೂಲಕರ ಪ್ರದೇಶಗಳಲ್ಲಿ ಕಡಿಮೆ ಪ್ರತಿನಿಧಿಸದ ಗುಂಪಿನ ಶಿಕ್ಷಣದ ಮೇಲೆ ಕೇಂದ್ರೀಕರಿಸಲು.

ಸ್ತ್ರೀ ಮತ್ತು ದ್ವಿಲಿಂಗ– ಲಿಂಗ ಪರಿವರ್ತಿತ ಮಕ್ಕಳ ಶಿಕ್ಷಣದಲ್ಲಿ ರಾಷ್ಟ್ರಕ್ಕೆ ಸಹಾಯ ಮಾಡಲು ಲಿಂಗ ಸೇರ್ಪಡೆ ನಿಧಿ.

ನ್ಯಾಷನಲ್ ಎಜುಕೇಷನಲ್ ಟೆಕ್ನಾಲಜಿ ವೇದಿಕೆ, (ಫೋರಮ್). ಇದು ಕಲಿಕೆಯನ್ನು ಸುಧಾರಿಸಲು ತಂತ್ರಜ್ಞಾನ ಬಳಕೆಯ ಕುರಿತು ವಿಚಾರ ವಿನಿಮಯಕ್ಕೆ ಅನುಕೂಲವಾಗುವ ವೇದಿಕೆಯಾಗಿದೆ.

NEP ಅಡಿಯಲ್ಲಿ 4 ವರ್ಷಗಳ ಗೌರವ ಪದವಿ ಕೋರ್ಸ್ ಅನ್ನು ಕರ್ನಾಟಕ ಸರ್ಕಾರ ಕೊನೆಗೊಳಿಸಲಿದೆ

ಇದರೊಂದಿಗೆ, ಈಗ ಮೂರನೇ ವರ್ಷದಲ್ಲಿರುವ ಎನ್ಇಪಿ ಅಡಿಯಲ್ಲಿ ಪ್ರವೇಶ ಪಡೆದ ಪ್ರಸ್ತುತ ಬ್ಯಾಚ್ ವಿದ್ಯಾರ್ಥಿಗಳು ನಾಲ್ಕನೇ ವರ್ಷಕ್ಕೆ ಮುಂದುವರಿಯುವ ಆಯ್ಕೆಯನ್ನು ಪಡೆಯುವ ಕೊನೆಯವರು.

ಬೆಂಗಳೂರು: ರಾಷ್ಟ್ರೀಯ ಶಿಕ್ಷಣ ನೀತಿ (ಎನ್ಇಪಿ) ಅಡಿಯಲ್ಲಿ ಜಾರಿಗೆ ತಂದಿರುವ ನಾಲ್ಕು ವರ್ಷಗಳ ಗೌರವ ಪದವಿ ಕಾರ್ಯಕ್ರಮವನ್ನು ಕರ್ನಾಟಕದಲ್ಲಿ ಮುಂದುವರಿಸಲು ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರವು ಅಧಿಕೃತ ಆದೇಶವನ್ನು ಹೊರಡಿಸಲಿದೆ.

ಮೇ 7 ರಂದು ಕರ್ನಾಟಕದಲ್ಲಿ ಎರಡನೇ ಹಂತದ ಮತದಾನ ಮುಗಿಯಲು ಕಾಯುತ್ತಿರುವ ಉನ್ನತ ಶಿಕ್ಷಣ ಇಲಾಖೆಯು ಮೇ 8 ರಂದು ಆನರ್ಸ್ ಕೋರ್ಸ್ಗಳನ್ನು ನಿಷೇಧಿಸಿ ಆದೇಶ ಹೊರಡಿಸಲಿದೆ. ಇದರೊಂದಿಗೆ ಪ್ರಸ್ತುತ ಎನ್ಇಪಿ ಅಡಿಯಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಬ್ಯಾಚ್ ಈಗ ಮೂರನೇ ವರ್ಷದಲ್ಲಿ, ನಾಲ್ಕನೇ ವರ್ಷಕ್ಕೆ ಮುಂದುವರಿಯುವ ಆಯ್ಕೆಯನ್ನು ಪಡೆಯುವ ಕೊನೆಯವರು.

ಕುರಿತು ಉನ್ನತ ಶಿಕ್ಷಣ ಇಲಾಖೆಯ ಅಧಿಕಾರಿಗಳು ಇತ್ತೀಚೆಗೆ ನಡೆದ ಸಭೆಯಲ್ಲಿ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಉಪಕುಲಪತಿಗಳಿಗೆ ತಿಳಿಸಲಾಗಿದೆ.

2024–25ರ ಪ್ರವೇಶಕ್ಕೆ ಅರ್ಜಿಗಳನ್ನು ಸ್ವೀಕರಿಸುವಾಗ ನಾಲ್ಕು ವರ್ಷಗಳ ಗೌರವ ಕಾರ್ಯಕ್ರಮಗಳು ಇರುವುದಿಲ್ಲ ಎಂದು ವಿದ್ಯಾರ್ಥಿಗಳಿಗೆ ತಿಳಿಸಲು ಉಪಕುಲಪತಿಗಳಿಗೆ ತಿಳಿಸಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ. "ಮೂರು ವರ್ಷಗಳ ಪದವಿ ಕೋರ್ಸ್ಗೆ ವಿದ್ಯಾರ್ಥಿಗಳನ್ನು ಪ್ರವೇಶಿಸಲು ಉಪಕುಲಪತಿಗಳಿಗೆ ತಿಳಿಸಲಾಗಿದೆ.

" N E P ರದ್ದತಿಯಿಂದ ಉನ್ನತ ಶಿಕ್ಷಣಕ್ಕೆ ಆಪತ್ತು "

ರಾಷ್ಟ್ರೀಯ ಶಿಕ್ಷಣ ನೀತಿ 2020 N E P ನಾಲ್ಕು ವರ್ಷಗಳ ಪದವಿ ಸ್ಥಗಿತಗೊಳಿಸಿ ಮೂರು ವರ್ಷಗಳ ಪದವಿ ಕೋರ್ಸುಗಳಿಗೆ ಸುತ್ತೋಲೆ ಹೊರಡಿಸಿರುವ ರಾಜ್ಯ ಸರ್ಕಾರದ ಕ್ರಮ ವಿದ್ಯಾರ್ಥಿಗಳಿಗೆ ಅಷ್ಟೇ ಅಲ್ಲ ವಿಶ್ವವಿದ್ಯಾಲಯಗಳಿಗೂ ಆಪತ್ತು ತರಲಿದೆ. ನಾಲ್ಕು ವರ್ಷಗಳ ಪದವಿ ಪೂರೈಸಿದವರು ನೇರವಾಗಿ Ph. ಆ ಪ್ರವೇಶ ಪಡೆಯಬಹುದು ಎಂದು ಯೋಚಿಸಿ ಸುತ್ತೋಲೆ ಹೊರಡಿಸಿದೆ ಈ ಹೊತ್ತಿನಲ್ಲಿ ರಾಜ್ಯ ಸರ್ಕಾರದ ನಿರ್ಧಾರ ಸರಿಯಲ್ಲ. ಇದು ವಿದ್ಯಾರ್ಥಿಗಳನ್ನು ವಂಚಿತರನ್ನಾಗಿ ಮಾಡುತ್ತದೆ.

N E P ಶಿಕ್ಷಣ ವ್ಯವಸ್ಥೆವು ಈಗಿನ ಮಕ್ಕಳಲ್ಲಿ ತುಂಬಾ ಪರಿಣಾಮಕಾರಿಯಾದ ಬೋಧನೆ ಮತ್ತು ಕಲಿಕೆಯ ವಿಷಯಗಳು ತುಂಬಾ ಬುದ್ಧಿವಂತರನ್ನಾಗಿ ಮಾಡಲು ಪ್ರೇರಕವಾಗಿದೆ. ಈ ನೀತಿ ಆಯೋಗವು ವಿದ್ಯಾರ್ಥಿಗಳಿಗೆ ಬೇಕು ಅಥವಾ ಬೇಡವೆಂಬ ನಿರ್ಧಾರ ಸರ್ಕಾರದ ಮೇಲಿದ್ದು ಎಲ್ಲ ವಿದ್ಯಾರ್ಥಿಗಳಿಗೂ ಅತ್ಯುತ್ತಮ ಶಿಕ್ಷಣ ಸಿಗಬೇಕೆಂಬುದು ನನ್ನ ಆಸೆ.

– ಶಿವಾನಂದ ಜಂಬಗಿ
ಅಥಣಿ

## ಗಜಲ್

ನೀ ಹಿಡಿದ ಒಂದು ಕ್ಯಾಚು ಮ್ಯಾಚನ್ನೇ
ಬದಲಿಸಿತು ಸೂರ್ಯ ಕುಮಾರ
ಭಾರತದ ಏಕತೆಯು ಗೆದ್ದು ಜಗವನ್ನೇ
ಬೆಳಗಿಸಿತು ಸೂರ್ಯ ಕುಮಾರ

ದೇಶದ ಕಲಿಗಳು ವಜ್ರ ಖಚಿತ ಕಿರೀಟದಲ್ಲಿ
ಎಲ್ಲಾ ಅಮೂಲ್ಯ ರತ್ನಗಳು
ನೂರೈವತ್ತು ಕೋಟಿ ಜನರ ಹೃದಯ
ಕಂಗೊಳಿಸಿತು ಸುರ್ಯ ಕುಮಾರ

ಒಬ್ಬೊಬ್ಬ ಕ್ರಿಕೆಟಿಗ ಕೋಟಿಗೊಬ್ಬನಾಗಿ
ಸೆಣೆಸಿ ಕೀರ್ತಿ ಪತಾಕೆ ಹಿಡಿದನು
ಭಾರತಾಂಬೆಯ ಮಡಿಲಿನಲ್ಲಿ ಭಾವೈಕತೆ
ವಿಜ್ರುಂಭಿಸಿತು ಸೂರ್ಯ ಕುಮಾರ

ವಿಶ್ವ ಸಮರ ಗೆದ್ದ ಸಿಡಿಲ ಮರಿಗಳು ನೀವು
ಮರೆಯುವುದುಂಟೇ ನಾವು
ವೀರ ಚರಿತೆಯ ಭೂಮಿಯು ಹಸನಾಗಿ
ಪ್ರಕಾಶಿಸಿತು ಸೂರ್ಯ ಕುಮಾರ

ಅದ್ಭುತ ಅವಿಸ್ಮರಣೀಯ ಆಟದ ವೈಖರಿಗೆ
ಫಿದಾ ಆದನು ಸಿರಾಜ್
ಅಭಿಮಾನಿಗಳ ಎದೆ ಪುಳಕಿತವಾಗಿ
ಝಲ್ಲೆನಿಸಿತು ಸೂರ್ಯ ಕುಮಾರ

– ಯು.ಸಿರಾಜ್ ಅಹಮದ್ ಸೊರಬ

# ಬಸ್ ಹೆಚ್ಚಳಕ್ಕೆ ಆಗ್ರಹಿಸಿ ರಸ್ತೆ ತಡೆದು ಎಬಿವಿಪಿ ಪ್ರತಿಭಟನೆ



**ವಿಜಯಪುರ :** ವಿದ್ಯಾರ್ಥಿಗಳ ಶೈಕ್ಷಣಿಕ ವೇಳಾಪಟ್ಟಿಗೆ ಅನುಗುಣವಾಗಿ ಬಸ್ ಪಾಸ್ ವಿತರಿಸುವಂತೆ ಹಾಗೂ ಬಸ್ ಗಳ ಸಂಖ್ಯೆಯನ್ನು ಹೆಚ್ಚಳ ಮಾಡುವಂತೆ ಆಗ್ರಹಿಸಿ ಎಬಿವಿಪಿ ಕಾರ್ಯಕರ್ತರು ನಗರದ ಕೇಂದ್ರ ಬಸ್ ನಿಲ್ದಾಣ ಎದುರು ರಸ್ತೆ ತಡೆ ನಡೆಸಿ ಕೆಲ ಹೊತ್ತು ಪ್ರತಿಭಟನೆ ನಡೆಸಿ ಆಕ್ರೋಶ ಹೊರ ಹಾಕಿದರು.

ಅನಂತರ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಿಜಯಪುರ ವಿಭಾಗೀಯ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಎಬಿವಿಪಿ ರಾಜ್ಯ ಕಾರ್ಯದರ್ಶಿ ಸಚಿನ್ ಕುಳಗೇರಿ ಮಾತನಾಡಿ, ಕರ್ನಾಟಕ ರಾಜ್ಯದಲ್ಲಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ತಮ್ಮ ಶಿಕ್ಷಣವನ್ನು ಪಡೆಯಲು ಅತೀ ಹೆಚ್ಚು ನಗರ ಪ್ರದೇಶಗಳ ಶಾಲಾ ಕಾಲೇಜುಗಳಿಗೆ ಬರುತ್ತಾರೆ. ವಿದ್ಯಾರ್ಥಿಗಳ ತರಗತಿಗಳು ಪ್ರಾರಂಭವಾದ ನಂತರ ಸರಿಯಾದ ಸಮಯಕ್ಕೆ ಬಸ್ ಪಾಸ್ ಅನ್ನು ವಿತರಣೆ ಮಾಡದೇ ಇರುವ ಕಾರಣ ಪ್ರತಿದಿನ ನೂರಾರು ರೂಪಾಯಿಗಳನ್ನು ಖರ್ಚು ಮಾಡಿಕೊಂಡು ಬಡ ವಿದ್ಯಾರ್ಥಿಗಳು ಶಾಲಾ–ಕಾಲೇಜುಗಳಿಗೆ ಬರುವುದು ಕಷ್ಟಕರವಾಗಿದೆ.

ಸರ್ಕಾರ ಶಾಲಾ ಕಾಲೇಜುಗಳು ಪ್ರಾರಂಭವಾದ ತಕ್ಷಣವೇ ವಿದ್ಯಾರ್ಥಿಗಳಿಗೆ ಬಸ್ ಪಾಸ್ ಅನ್ನು ಸಕಾಲದಲ್ಲಿ ಒದಗಿಸುವ ನಿಟ್ಟಿನಲ್ಲಿ ಹೆಚ್ಚು ಸಿಬ್ಬಂದಿಗಳನ್ನು ಬಳಸಿಕೊಂಡು ಬಸ್ ಪಾಸ್ ಒದಗಿಸುವ ಅವಶ್ಯಕತೆ ಇದೆ. ಬಸ್ ಪಾಸ್ ಗೆ ಅರ್ಜಿ ಸಲ್ಲಿಸಿದ ನಂತರ ವಾರಗಳ ಕಾಲ ವಿದ್ಯಾರ್ಥಿಗಳು ಬಸ್ ಪಾಸ್ ಅನ್ನು ಪಡೆಯಲು ಕಾಯುವ ಸ್ಥಿತಿ ರಾಜ್ಯದಲ್ಲಿ ಇದೆ. ಇದ–ರಿಂದ ಬಡ ವಿದ್ಯಾರ್ಥಿಗಳು ಶಾಲಾ ಕಾಲೇಜುಗಳಿಗೆ ಬಸ್ ಪಾಸ್ ಸಿಗುವ ವರೆಗೂ ಬರದೆ ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ ಎಂದರು.

ಜಿಲ್ಲಾ ಸಂಚಾಲಕ ಮಂಜುನಾಥ ಹಳ್ಳಿ ಅವರು ಮಾತನಾಡಿ, ಕರ್ನಾಟಕ ರಾಜ್ಯದಲ್ಲಿ ವಿಶ್ವವಿದ್ಯಾಲಯಗಳ ಶೈಕ್ಷಣಿಕ ವೇಳಾಪಟ್ಟಿ ಬಹಳಷ್ಟು ವ್ಯತ್ಯಾಸವಿದ್ದು, ವಿಶ್ವವಿದ್ಯಾಲಯಗಳ ಶೈಕ್ಷಣಿಕ ವೇಳಾಪಟ್ಟಿಗೆ ಅನುಗುಣವಾಗಿ ವಿದ್ಯಾರ್ಥಿಗಳಿಗೆ ಬಸ್‌ಪಾಸ್ ವಿತರಣೆ ಮಾಡುವಂತೆ ಕ್ರಮಕೈಗೊಳ್ಳಬೇಕು. ರಾಜ್ಯ ಸರ್ಕಾರ ಮಹಿಳೆಯರಿಗೆ ಉಚಿತ ಪ್ರಯಾಣ ಮಾಡಿದ್ದರಿಂದ ಮಹಿಳೆಯರು ಬಸ್‌ಗಳಲ್ಲಿ ಹೆಚ್ಚು ಓಡಾಡುತ್ತಿರುವುದರಿಂದ ಪ್ರಯಾಣಿಕರ ಸಂಖ್ಯೆ ಗಣನೀಯ ಏರಿಕೆಯಾಗಿದೆ. ಪ್ರಯಾಣಿಕರ ಹೆಚ್ಚಳವನ್ನು ಗಣನೆಗೆ ತಗೆದುಕೊಂಡು ಬಸ್‌ಗಳ ಸಂಖ್ಯೆಯನ್ನು ಹೆಚ್ಚಳ ಮಾಡದೆ ಇರುವುದರಿಂದ ವಿದ್ಯಾರ್ಥಿಗಳಿಗೆ ಬಸ್ ಗಳಲ್ಲಿ ಓಡಾಟ ಮಾಡಲು ಬಹಳ ಕಷ್ಟವಾಗುತ್ತಿದೆ. ಇದ–ರಿಂದ ವಿದ್ಯಾರ್ಥಿಗಳು ಬಸ್ಸಿನ ಬಾಗಿಲಲ್ಲಿ ನಿಂತು ಪ್ರಯಾಣವನ್ನು ಮಾಡುವುದು ಕಂಡು ಬರುತ್ತಿದೆ, ಸರಕಾರ ಬಸ್‌ಗಳ ಸಂಖ್ಯೆಯನ್ನು ಹೆಚ್ಚಳ ಮಾಡುವ ನಿಟ್ಟಿನಲ್ಲಿ ನಿರ್ಧಾರ ಮಾಡಬೇಕು. ಯಾವ ಹಳ್ಳಿಗಳಿಗೆ ಬಸ್ ಗಳ ಕೊರತೆ ಇದೆ. ಆ ಹಳ್ಳಿಗಳಿಗೆ ಸಮರ್ಪಕವಾದ ಬಸ್‌ಗಳ ವ್ಯವಸ್ಥೆಯನ್ನು ಶಾಲಾ–ಕಾಲೇಜುಗಳ ಸಮಯಕ್ಕೆ ಒದಗಿಸಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ವಿಜಯಪುರ ವಿಭಾಗ ಸಂಘಟನಾ ಕಾರ್ಯದರ್ಶಿ ಹರ್ಷಾ ನಾಯಕ, ಮಲ್ಲಿಕಾರ್ಜುನ ಮಾಳಿ, ಶ್ರೀಕಾಂತ ರೆಡ್ಡಿ, ಸಂದೀಪ ಅರಳಗುಂಡಗಿ, ಕವಿತಾ ಬಿರಾದಾರ, ಐಶ್ವರ್ಯ ಆಸಂಗಿ, ಆರತಿ ನಾವಿ, ಶಿಲ್ಪಾ ಪೂಜಾರಿ, ಬಾಲಾಜಿ ಬಿರಾದಾರ, ಶಿವಾಜಿ, ಶ್ರೀಕಾಂತ, ಸ್ನೇಹಾ ಹಿರೇಮಠ, ನೂರಾರು ಕಾರ್ಯಕರ್ತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಬೃಹತ್ ಪ್ರತಿಭಟನೆ




**ತಾಳಿಕೋಟೆ :** ರಾಜ್ಯ ಸರ್ಕಾರವು ಜನ ಸಾಮಾನ್ಯರ ಹೊಟ್ಟೆಯ ಮೇಲೆ ಹೊಡೆಯುವದರೊಂದಿಗೆ ದಿನಬಳಿಕೆ ವಸ್ತುಗಳಾದ ಪೇಟ್ರೋಲ್, ಡಿಸೇಲ್, ಅಲ್ಲದೇ ಹಾಲಿನ ದರದ ಜೊತೆಗೆ ಎಲ್ಲ ವಸ್ತುಗಳ ಬೆಲೆಯ ಮೇಲೆ ತೆರಿಗೆಯನ್ನು ಹೆಚ್ಚಿಸಿರುವದನ್ನು ಖಂಡಿಸಿ ತಾಳಿಕೋಟೆಯ ಭಾರತೀಯ ಜನತಾ ಪಕ್ಷದ ನಗರ ಘಟಕದ ನೇತೃತ್ವದಲ್ಲಿ ಪಟ್ಟಣದಲ್ಲಿ ಬುಧವಾರರಂದು ಬೃಹತ್ ಪ್ರತಿಭಟನೆ ನಡೆಸಿ ರಾಜ್ಯ ಸರ್ಕಾರದ ವಿರೂದ್ಧ ಆಕ್ರೋಶ ಹೊರ ಹಾಕಿದರು.

ಪಟ್ಟಣದ ಶ್ರೀ ಬಸವೇಶ್ವರ ವೃತ್ತದಲ್ಲಿ ಜಮಾವಣೆಗೊಂಡ ಬಿಜೆಪಿ ಕಾರ್ಯಕರ್ತರು ದಿನಬಳಿಕೆ ವಸ್ತುಗಳ ಬೆಲೆ ರಾಜ್ಯ ಸರ್ಕಾರವು ಹೆಚ್ಚಿಸುತ್ತಾ ಸಾಗಿದೆ ಬಡಬಗ್ಗರು ಜೀವನ ನಡೆಸುವದೇ ದ್ುಸ್ಥರ ವೆಂಬಂತಾಗಿದೆ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೇಸ್ ಸರ್ಕಾರವು ಅಧಿಕಾರಕ್ಕೆ ಬಂದ ಒಂದೇ ವರ್ಷದಲ್ಲಿ ಪೇಟ್ರೋಲ್,ಡಿಸೇಲ್ ಬೆಲೆಯನ್ನು ಎರಡುಭಾರಿಎಚ್ಚಿಸಿದೆಮತ್ತುಕಳೆದ ಹಾಲಿನ ದರ ಹೆಚ್ಚಿಸಿ ರೈತರಿಗೆ ಪ್ರೋತ್ಸಾಹದ ಹೆಚ್ಚಿಸುತ್ತೇವೆಂದು ಹೇಳಿ ಕಳೆದ 3 ತಿಂಗಳ ಹಿಂದೆ ಬೆಲೆ ಏರಿಸಿದ್ದಾರೆ ಮತ್ತೇ ಈಗ ಹಾಲಿನ ದರವನ್ನು ಹೆಚ್ಚಿಸಿ ಗ್ಯಾ–ರೆಂಟಿ ಹೊಟ್ಟೆ ತುಂಬಿಸಿಕೊಳ್ಳಲು ವ್ುುಂದಾಗಿದ್ದಾರೆಂದ್ು ಆರೋಪಿಸಿದ ಅವರು ರಾಜ್ಯ ಸರ್ಕಾರದಿಂದ 5 ಗ್ಯಾರೆಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ ಮಹಿಳೆಯರಿಗೆ ಒಂದು ಕಡೆ ಕೊಟ್ಟಂತೆ ಮಾಡಿ ಪುರುಷರಿಂದ ಇನ್ನೊಂದು ಕೈಯಿಂದ ಕಸಿದುಕೊಳ್ಳುವಂತಹ ಕಾರ್ಯ ನಡೆಸಿದ್ದಾರೆ. ಮನೆಗಳಿಗೆ ವಿದ್ಯುತ್ ಉಚಿತವಾಗಿ ನೀಡುತ್ತಿದ್ದೇವೆಂದು ಹೇಳುವ ಮುಖ್ಯಮಂತ್ರಿಗಳು ವಿದ್ಯುತ್ ದರವನ್ನು ಹೆಚ್ಚಿಸಿ ಮತ್ತೊಂದು ಕಡೆಯಿಂದ ಜನರಿಂದ ವಸೂಲಿಗೆ ಇಳಿದಿದೆತಾಳಮೇಳವಿಲ್ಲದರಾಜ್ಯ ಕಾಂಗ್ರೇಸ್‌ಸರ್ಕಾರವುಬಡಬಗ್ಗರ ಸರ್ಕಾರವಾಗದೇ ಬಡವರಿಂದ ಕಿತ್ತೂ ತಿನ್ನುವ ಸರ್ಕಾರವಾಗಿದೆ ಎಂದು ಆರೋಪಿಸಿದ ಅವರು ಕೂಡಲೇ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಬಡ ಬಗ್ಗರ ದಿನಬಳಿಕೆ ವಸ್ತುಗಳ ಬೆಲೆ ಹೆಚ್ಚಿಸಿರುವದನ್ನು ಇಳಿಸಬೇಕು ಇಲ್ಲದಿದ್ದರೆ ಬಿಜೆಪಿ ನೇತೃತ್ವದಲ್ಲಿ ನಿರಂತರ ಪ್ರತಿಭಟನೆ ರಾಜ್ಯದಲ್ಲಿ ನಡೆಯಲಿದೆ ಎಂದು ಎಚ್ಚರಿಸಿದರು.

ಪ್ರತಿಭಟನಾ ಸಮಯದಲ್ಲಿ ಕಾರ್ಯಕರ್ತರು ಟೈಯ–ರ್ಗೆ ಬೆಂಕಿ ಹಚ್ಚಿ ಮುಖ್ಯಮಂತ್ರಿ ಸಿದ್ದರಾವ್ುಯ್ಯನವರ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರ ಭಾವಚಿತ್ರವನ್ನು ದಹಿಸಿ, ಗಂಟೆ–ಕಾಲ ರಸ್ತೆ ತಡೆ ನಡೆಸಿ ಆಕ್ರೋಶ ಹೊರಹಾಕಿದರು.

ಈ ಪ್ರತಿಭಟನಾ ನೇತೃತ್ವವನ್ನು ಬಿಜೆಪಿ ಮಹಿಳಾ ಮೂರ್ಚಾ ಜಿಲ್ಲಾ ಉಪಾಧ್ಯಕ್ಷೆ ಶ್ರೀಮತಿ ಸುವರ್ಣಾ ಬಿರಾದಾರ, ಶಶಿಧರ ಡಿಸಲೆ, ಮಂಜು ಶೆಟ್ಟಿ, ಪ್ರಕಾಶ ಹಜೇರಿ, ಮಾನಸಿಂಗ್ ಕೊಕಟನೂರ, ಶರಣಗೌಡ ಗೊಟಗುಣಕಿ, ದ್ಯಾಮನಗೌಡ ಪಾಟೀಲ, ಸಂತೋಷ ಹಜೇರಿ, ಮಹಾಂತೇಶ ಮುರಾಳ, ಕಿರಣ ಬಡಿಗೇರ, ನಾಗರಾಜ ಬಳಿಗಾರ, ಮುದಕಪ್ಪಬಡಿಗೇರ,ಜಯಸಿಂಗ್ ಮೂಲಿಮನಿ, ಶಂಕರಯ್ಯ ಹಿರೇಮಠ, ರವಿ ಕಟ್ಟಿಮನಿ, ವಾಸುದೇವ ಹೆಬಸೂರ, ವಿಠ್ಠಲ ಮೋಹಿತೆ, ಪ್ರಕಾಶ ಪಾಟೀಲ, ರಾಘು ಮಾನೆ, ಪ್ರಭು ನಾಯಕ, ವಿರೇಶ ಸಾಸನೂರ, ರಾಘವೇಂದ್ರ ಬಿಜಾಪೂರ,ನಾಗರಾಜಬಳಿಗಾರ, ಮಂಜು ಮೈಲೇಶ್ವರ, ಮಂಜು ಬಡಿಗೇರ, ನದೀಂ ಕಡು, ಶ್ರೀಶೈಲ ದೊಡಮನಿ, ಜಿಲ್ಲಾ ಯುವ ಮೂರ್ಚಾ ಪ್ರಧಾನ ಕಾರ್ಯದರ್ಶಿ ಅಶೋಕ ರಾಠೋಡ, ಮಂಡಲ ಯುವ ಮೂರ್ಚಾ ಅಧ್ಯಕ್ಷ ಗೀರಿಶಗೌಡ ಪಾಟೀಲ, ರವೀಂದ್ರ ಬಿರಾದಾರ, ಸಂತೋಷ ಬಾದರಬಂಡಿ, ಮೊದಲಾದವರು ವಹಿಸಿದ್ದರು.

# ಅಂತರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ಮತ್ತು ಕಳ್ಳ ಸಾಗಾಣಿಕೆ ವಿರೋಧಿ ಸಪ್ತಾಹ ಆಚರಣೆ

**ವಿಜಯಪುರ:**ರಾಷ್ಟ್ರೀಯಮಾನಸಿಕ ಆರೋಗ್ಯ ಕಾರ್ಯಕ್ರಮದ ಅಡಿಯಲ್ಲಿ ಅಂತರ್ರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ಮತ್ತು ಕಳ್ಳ ಸಾಗಾಣಿಕೆ ವಿರೋಧಿ ಸಪ್ತಾಹ ದಿನಾಚರಣೆ ಅಂಗವಾಗಿ ಬುಧವಾರ ನಗರದಲ್ಲಿ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಯಿತು.




ಜಾಗೃತಿ ಜಾಥಾಕ್ಕೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ, ಪ್ರಧಾನ ಹಿರಿಯ ಸಿವ್ಹಿಲ್ ನ್ಯಾಯಾಧೀಶ ಮಲ್ಲಿಕಾರ್ಜುನ ಅಂಬಲಿ, ಉಪ ಪೋಲಿಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಅಧಿಕಾರಿಡಾ.ಬಸವರಾಜ ಹುಬ್ಬಳ್ಳಿ ಜಂಟಿಯಾಗಿ ಚಾಲನೆ ನೀಡಿದರು.

ನಗರದ ಸಿದ್ದೇಶ್ವರ ದೇವಸ್ಥಾನದಿಂದಆರಂಭಗೊಂಡ ಜಾಥಾವು, ನಗರದ ಗಾಂಧಿವೃತ್ತದ ಮಾರ್ಗವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯವರೆಗೆ ಸಾಗಿ, ದಾರಿಯುದ್ದಕೂ ಜಾಗೃತಿ ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಮನೋವೈದ್ಯ ಡಾ.ಮಂಜುನಾಥ ಮಸಳಿ ಮಾತನಾಡಿ, ಮಾದಕ ವಸ್ತುಗಳ ಸೇವನೆಯಿಂದ ಯುವ ಜನಾಂಗದ ಮೇಲೆ ದುಷ್ಪರಿಣಾಮ ಬೀರುತ್ತಿದ್ದು, ಯುವ ಜನಾಂಗ ಮಾದಕ ವಸ್ತುಗಳಿಂದ ದೂರವಿರುವಂತೆ ಸಲಹೆ ನೀಡಿದ ಅವರು, ಉಚಿತ ಸಹಾಯವಾಣಿ 14416 ಸಂಖ್ಯೆಗೆ ಸಂಪರ್ಕಿಸಿ ಮಾಹಿತಿ ಪಡೆಯುವಂತೆ ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಡಾ.ಸಂಪತ್ ಗುಣಾರಿ, ಡಾ. ಕವಿತಾ ದೊಡಮನಿ, ಡಾ. ಪರಶುರಾಮ ಹಿಟ್ನಳ್ಳಿ, ಜಿ.ಎಂ. ಕೋಲೂರ ಸೇರಿದಂತೆ ಜಿಲ್ಲಾ ಮಾನಸಿಕ ಕಾರ್ಯಕ್ರಮ ಸಿಬ್ಬಂದಿಗಳು, ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿ, ಸಿಬ್ಬಂದಿಗಳು, ಬಿಎಲ್‌ಡಿಇಎ ಬಿ.ಎಂ. ಪಾಟೀಲ ನರ್ಸಿಂಗ್ ಕಾಲೇಜ್, ತುಳಜಾಭವಾನಿ ನರ್ಸಿಂಗ್ ಕಾಲೇಜ್ ವಿದ್ಯಾರ್ಥಿಗಳು ಇತರರು ಉಪಸ್ಥಿತರಿದ್ದರು.

# ಹು-ಧಾ ಮೇಯರ್ ಬಡಿಗೇರ, ಉಪಮೇಯರ್ ಬಿಜವಾಡ



**ಹುಬ್ಬಳ್ಳಿ :** ಬಹು ಕುತೂಹಲ ಕೆರಳಿಸಿದ್ದ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ನೂತನ ಮೇಯರ್, ಉಪಮೇಯರ್ ಆಯ್ಕೆ ಇಂದು ನಡೆದಿದ್ದು, ಮೇಯರ್ ಆಗಿ ಬಿಜೆಪಿಯ ರಾಮಪ್ಪ ಬಡಿಗೇರ ಆಯ್ಕೆಯಾದರೆ, ಉಪಮೇಯರ್ ಆಗಿ ಅದೇ ಪಕ್ಷದ ದುರ್ಗಮ್ಮ ಬಿಜವಾಡ ಆಯ್ಕೆಯಾಗಿದ್ದಾರೆ.

ಮೇಯರ್ ಸ್ಥಾನ ಹಿಂದುಳಿದ ವರ್ಗ ಅ' ಹಾಗೂ ಉಪಮೇಯರ್ ಸ್ಥಾನಪರಿಶಿಷ್ಟ ಜಾತಿಯ ಮಹಿಳೆ' ಗೆ ಮೀಸಲಾಗಿತ್ತು.

ಕಾಂಗ್ರೆಸ್‌ನಿಂದ ಮೇಯರ್ ಸ್ಥಾನಕ್ಕೆ ಇಮಾಮ್ ಹುಸೇನ್ ಎಲಿಗಾರ ಕಣಕ್ಕಿಳಿದಿದ್ದರೆ ಉಪಮೇಯರ್ ಸ್ಥಾನಕ್ಕೆ ಮಂಗಳಮ್ಮ ಹಿರೇಮನಿ ಸ್ಪರ್ಧಿಸಿದ್ದರು. ರಾಮಪ್ಪ ಬಡಿಗೇರ್ ಹಾಗೂ ದುರ್ಗಮ್ಮ ಬಿಜವಾಡ ಅವರ ಪರ 47 ಮತಗಳು ಚಲಾವಣೆಯಾದರೆ ಎಲಿಗಾರ ಹಾಗೂ ಮಂಗಳಮ್ಮ ಹಿರೇಮನಿ ಅವರ ಪರ 36 ಮತಗಳು ಚಲಾವಣೆಯಾಗಿ ಬಡಿಗೇರ ಹಾಗೂ ಬಿಜವಾಡ ಅವರ ಆಯ್ಕೆಯನ್ನು ಘೋಷಿಸಲಾಯಿತು. ಮುಂಜಾನೆ ನಾಮಪತ್ರ ಸಲ್ಲಿಕೆ ಕಾರ್ಯದ ನಂತರ ನಾಮಪತ್ರ ಪರಿಶೀಲನೆ, ನಾಮಪತ್ರ ಹಿಂಪಡೆಯಲು ಅವಕಾಶ, ಇತ್ಯಾದಿ ಪ್ರಕ್ರಿಯೆಗಳು ನಡೆದ ಬಳಿಕ ಮಧ್ಯಾಹ್ನ ಸದಸ್ಯರು ಕೈ ಎತ್ತುವ ಮೂಲಕ ಮೇಯರ್ ಮತ್ತು ಉಪಮೇಯರ್ ಆಯ್ಕೆ ನಡೆಯಿತು.

ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಎಸ್.ಬಿ. ಶೆಟ್ಟೆಣ್ಣವರ ಚುನಾವಣಾ ಪ್ರಕ್ರಿಯೆಯನ್ನು ನಡೆಸಿಕೊಟ್ಟರು. ಈ ಸಂದರ್ಭದಲ್ಲಿ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಶಾಸಕರಾದ ಮಹೇಶ ಟೆಂಗಿನಕಾಯಿ, ಅರವಿಂದ ಬೆಲ್ಲದ, ಪ್ರಸಾದ ಅಬ್ಬಯ್ಯ, ವಿಧಾನ ಪರಿಷತ್ ಸದಸ್ಯರಾದ ಪ್ರದೀಪ್ ಶೆಟ್ಟರ್, ಎಸ್.ವಿ. ಸಂಕನೂರ ಉಪಸ್ಥಿತರಿದ್ದರು.

# ಧಾರವಾಡ: ಕಾಲಮಿತಿ ಇಳಿಕೆ



**ಧಾರವಾಡ:** ರಾಜ್ಯಾದ್ಯಂತ ರೈತರ ಬೇಡಿಕೆ ಹಿನ್ನಲೆಯಲ್ಲಿ ಕೆಲವು ಕೃಷಿ ಸೂಕ್ಷ್ಮ ನೀರಾವರಿ ಪರಿಕರಗಳ ಸೌಲತ್ತು ಪಡೆಯಲು ಇರುವ ಕಾಲಮಿತಿಯನ್ನು ಏಳು ವರ್ಷಗಳಿಂದ 5 ವರ್ಷಗಳಿಗೆ ಇಳಿಸಲು ನಿರ್ಧಾರ ಕೈಗೊಳ್ಳಲಾಗುವುದು ಎಂದು ಕೃಷಿ ಸಚಿವರಾದ ಎನ್ ಚಲುವರಾಯಸ್ವಾಮಿ ತಿಳಿಸಿದ್ದಾರೆ.

ಧಾರವಾಡ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಕ್ಷೇತ್ರದ ಹೆಬ್ಬಳ್ಳಿ ಗ್ರಾಮದಲ್ಲಿ ವಿವಿಧ ಕೃಷಿ ಪ್ರಾತ್ಯಕ್ಷಿಕೆ ಉದ್ಘಾಟಿಸಿ, ಫಲಾನುಭವಿಗಳಿಗೆ ಸೌಲತ್ತು ವಿತರಿಸಿ ಅವರು ಮಾತನಾಡಿದರು. ನಮ್ಮ ಸರ್ಕಾರ ಹಿಂದೆಂದಿಗಿಂತ ಕೃಷಿಗೆ ಹೆಚ್ಚಿನ ಆದ್ಯತೆ ನೀಡಿದೆ.

ಮುಂಗಾರು ಹಂಗಾಮಿಗೆ 1700 ಕೋಟಿ ರೂ ಬೆಳೆ ವಿಮೆ ಪಾವತಿಸಲಾಗಿದೆ. ಕಳೆದ ಸಾಲಿನಲ್ಲಿ ಸುಮಾರು 1000 ಕೋಟಿ ರೂ ವೆಚ್ಚದಲ್ಲಿ ಕೃಷಿ ಪರಿಕರಗಳನ್ನು ವಿತರಿಸಲಾಗಿದೆ ಎಂದು ಚಲುವರಾಯಸ್ವಾಮಿ ಹೇಳಿದರು.

ವಿಶ್ವ ವಿದ್ಯಾನಿಲಯ ಗಳ ಮೂಲಕ ರೈತರಿಗೆ ಸಂಶೋದನೆ, ಮಾರ್ಗದರ್ಶನಗಳ ನೆರವು ನೀಡಲಾಗುತ್ತಿದೆ ಎಂದು ಅವರು ಹೇಳಿದರು. ವಿನಯ್ ಕುಲಕರ್ಣಿ ಕೇತ್ರದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿದ್ದಾರೆ. ನಿರಂತರವಾಗಿ ಕ್ಷೇತ್ರದ ಅಭಿವೃದ್ಧಿಗೆ ಎಲ್ಲಾ ಸಚಿವರ ಸಂಪರ್ಕಹೊಂದಿದ್ದಾರೆ ಎಂದರು.

ಕೃಷಿ ಸಚಿವರಾದ ಎನ್ ಚಲುವರಾಯಸ್ವಾಮಿ ಅವರು ಧಾರವಾಡ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಹೆಬ್ಬಳ್ಳಿ ಗ್ರಾಮದಲ್ಲಿ ಸಮಗ್ರ ಕೃಷಿ ಪದ್ಧತಿ ಅಳವಡಿಸಿಕೊಂಡ ರೈತ ಯಲ್ಲಪ್ಪ ಈಶ್ವರಪ್ಪ ಸಾಲಿ ಅವರ ಕೃಷಿ ತಾಕುಗಳಿಗೆ ಭೇಟಿ ನೀಡಿ ರೈತರೊಂದಿಗೆ ಸಮಾಲೋಚನೆ ನಡೆಸಿದರು. ಕೃಷಿ ಸಚಿವರು ಹೆಬ್ಬಳಿ ಗ್ರಾಮದಲ್ಲಿ ಸಿದ್ದಪ್ಪ ಬಸಪ್ಪ ಬಿಕ್ಕೋಜಿ ಅವರ ಜಮೀನಿನಲ್ಲಿ ಡ್ರೋಣ್ ಮೂಲಕ ನ್ಯಾನೋ ಯೂರಿಯ ಸಿಂಪಡಣೆ ಪ್ರಾತ್ಯಕ್ಷಿಕೆಗೆ ಚಾಲನೆ ನೀಡಿದರು. ಇದೇ ಗ್ರಾಮದಲ್ಲಿ ಸಚಿವರು ಆಹಾರ ಮತ್ತು ಪೌಷ್ಠಿಕ ಭದ್ರತಾ ಯಾಜನೆಯಡಿ ರೈತರಿಗೆ ರಾಸಾಯನಿಕ, ರಸ ಗೊಬ್ಬರ ಕೀಟ ನಾಶಕ ವಿತರಣೆ ಮಾಡಿದರು.

ಕೃಷಿ ಸಚಿವರು ಹೆಬ್ಬಳ್ಳಿ ಗ್ರಾಮದಲ್ಲಿ ಹೈಟೆಕ್ ಹಾರ್ವೆಸ್ಟ್ ಹಬ್ ಯೋಜನೆಯಡಿ ಸಂಗಪ್ಪ ಕಲ್ಲಪ್ಪ ಹಳಿಯಾಳ ಅವರಿಗೆ ಬಹುಬೆಳೆ ಹೈಟೆಕ್ ಕಟಾವು ಯಂತ್ರವನ್ನು ವಿತರಿಸಿದರು. ಇದೆ ಸಂದರ್ಭದಲ್ಲಿ ಕೃಷಿ ಜಂಟಿ ನಿರ್ದೇಶಕ ಕಿರಣಕುಮಾರ, ಕೃಷಿ ಉಪನಿರ್ದೇಶಕಿ ಜಯಶ್ರೀ ಹಿರೇಮಠ ಅವರು ಉಪಸ್ಥಿತರಿದ್ದರು.

# ಗಂಗಾವತಿ: ವಸತಿ ನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಕೊಪ್ಪಳ :** 2024-25ನೇ ಸಾಲಿಗಾಗಿ ಗಂಗಾವತಿ, ಕನಕಗಿರಿ ಹಾಗೂ ಕಾರಟಗಿ ತಾಲ್ಲೂಕಾ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರದ ಬಾಲಕರ/ಬಾಲಕಿಯರ ವಸತಿ ನಿಲಯಗಳ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿಯ ಮೆಟ್ರಿಕ್ ಪೂರ್ವ ವಸತಿ ನಿಲಯಗಳಾದ ಗಂಗಾವತಿ, ಕನಕಗಿರಿ, ಮುಸಲಾಪುರ, ನವಲಿ ಹಾಗೂ ಕಾರಟ-ಗಿಯ ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ, ಗಂಗಾವತಿ ಹಾಗೂ ಕನಕಗಿರಿಯ ಡಾ.ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ, ಮೆಟ್ರಿಕ್ ನಂತರದ ವಸತಿ ನಿಲಯಗಳಾದ ಗಂಗಾವತಿ ಹಾಗೂ ಕನಕಗಿರಿಯ ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ ಮತ್ತು ಗಂಗಾವತಿಯ ಡಾ.ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯಗಳ ಪ್ರವೇಶಕ್ಕೆ ಅರ್ಹ ವಿದ್ಯಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ www.sw.kar.nic.in ಮೂಲಕ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಿದ ನಂತರ ಅರ್ಜಿ ಪ್ರತಿಯೊಂದಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಹಿಂದಿನ ತರಗತಿಯ ಅಂಕಪಟ್ಟಿಯ ದೃಢೀಕೃತ ಜರಾಕ್ಸ್ ಪ್ರತಿಗಳು, ವಿದ್ಯಾರ್ಥಿ ಹಾಗೂ ಪೋಷಕರ ಆಧಾರ್ ಕಾರ್ಡ್ ಪ್ರತಿಗಳು ಮತ್ತು ವಿದ್ಯಾರ್ಥಿಯ ಪಾಸ್‌ಪೋರ್ಟ್ ಅಳತೆಯ 04 ಭಾವಚಿತ್ರಗಳೊಂದಿಗೆ ಸಹಾಯಕ ನಿರ್ದೇಶಕರು ಗ್ರೇಡ್-1, ಸಮಾಜ ಕಲ್ಯಾಣ ಇಲಾಖೆ, ಗಂಗಾವತಿ ಕಾರ್ಯಾಲಯಕ್ಕೆ ಸಲ್ಲಿಸಬೇಕು ಎಂದು ಇಲಾಖೆಯ ಸಹಾಯಕ ನಿರ್ದೇಶಕರು (ಗ್ರೇಡ್-1) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರ ನಡೆಸಬೇಕಾದರೆ ದರ ಏರಿಕೆ ಅನಿವಾರ್ಯ: ಸಚಿವ ಸಂತೋಷ ಲಾಡ್



**ಹುಬ್ಬಳ್ಳಿ :** "ಸಿಎಂ, ಡಿಸಿಎಂ ಹುದ್ದೆ ಖಾಲಿಯಿಲ್ಲ, ಅದನ್ನೆಲ್ಲ ಹೈ - ಕಮಾಂಡ್ ತೀರ್ಮಾನ ಮಾಡುತ್ತೆ. ಒಕ್ಕಲಿಗ ಶ್ರೀಗಳ ಹೇಳಿಕೆಗೆ ಮುಖ್ಯಮಂತ್ರಿಗಳು ಈಗಾಗಲೇ ಸ್ಪಷ್ಟೀಕರಣ ಕೊಟ್ಟಿದ್ದಾರೆ" ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ಹೇಳಿದರು.

ನಗರದಲ್ಲಿ ಇಂದು (ಶನಿವಾರ) ಮಾತನಾಡಿದ ಅವರು, "ಮುಖ್ಯಮಂತ್ರಿ ಆಗಬೇಕಾದರೆ ಹೈಕಮಾಂಡ್, ಎಲ್ಲ ಶಾಸಕರ ನಿರ್ಧಾರದ ಮೇಲೆ ಆಗಬೇಕು, ಹೈಕಮಾಂಡ್ ಏನು ತೀರ್ಮಾನ ಮಾಡಿರುತ್ತೆ ಅದೇ ಫೈನಲ್. ಅದಕ್ಕೆ ಸಿಎಂ ಸ್ಪಷ್ಟನೆ ನೀಡಿದ್ದಾರೆ" ಎಂದ ಅವರು, "ಸರ್ಕಾರ ನಡೆಸಬೇಕಾದರೆ ದರ ಏರಿಸಲೇಬೇಕು. ಹಾಲಿನ ದರದ ಬಗ್ಗೆ ಈಗಾಗಲೇ ಸಿಎಂ ಅವರು ಸ್ಪಷ್ಟೀಕರಣ ಕೊಟ್ಟಿದ್ದಾರೆ. ಬೇರೆ ರಾಜ್ಯಗಳಿಗೆ ಹೋಲಿಸಿದರೆ ಹಾಲಿನ, ಪೆಟ್ರೋಲ್ ಡಿಸೇಲ್ ದರ ಎಲ್ಲವೂ ಕಡಿಮೆ ಇದೆ. ನಮ್ಮ ಸರ್ಕಾರ ನಡೆಸಬೇಕಾದರೆ ದರ ಏರಿಸಬೇಕಾಗುತ್ತದೆ. 60 ಸಾವಿರ ಕೋಟಿ ರೂಪಾಯಿಯನ್ನು ನಾವು ಗ್ಯಾರಂಟಿಗೆ ಕೊಡಬೇಕಾಗುತ್ತೆ. ಅದಕ್ಕಾಗಿ ಮಾಡಬೇಕು. ಹತ್ತು ವರ್ಷಗಳಲ್ಲಿ ಕೇಂದ್ರ ಸರ್ಕಾರ ಎಷ್ಟು ಜಾಸ್ತಿ ಮಾಡಿದ್ದಾರೆ. ಅದರ ಬಗ್ಗೆ ಮಾತಾಡೊದು ಬೇಡ್ವಾ. ನಿರ್ಮಲಾ ಸೀತಾರಮನ್ ಇದರ ಬಗ್ಗೆ ಮಾತಾಡಬೇಕು. ಅವರು ದೇಶ ನಡೆಸಬೇಕಾದರೆ, ನಾವು ರಾಜ್ಯ ನಡೆಸಬೇಕು ಎಂದು ಬೆಲೆ ಏರಿಕೆಯನ್ನು ಸಮರ್ಥನೆ ಮಾಡಿಕೊಂಡರು.

"ರಾಮ ಮಂದಿರ ಸೋರುತ್ತಿದೆ, ಯಾರು ನಿಲ್ಲಿಸಬೇಕು. ಬಿಜೆಪಿ ಅವರು ಆರೋಪ ಮಾಡುವುದೇ ಅವರ ಕೆಲಸ, ರಾಮ ಮಂದಿರ ಸೋರುತ್ತಿದೆ ಅದನ್ನ ಯಾರು ಹೋಗಿ ನಿಲ್ಲಸಬೇಕು. ನೀಟ್ ಪೇಪರ್ ಲೀಕ್ ಆಯಿತು. ಅದರ ಬಗ್ಗೆ ಯಾರು ಮಾತಾಡೋದು ಬೇಡ್ವಾ. ಬಿಜೆಪಿ ಅವರು ಯಾವುದೇ ರೂಲಿಂಗ್ ಸರ್ಕಾರ ಇರುತ್ತೆ ಅದರ ವಿರುದ್ಧ ಮಾತನಾಡೋದೆ ಅವರ ಕೆಲಸ" ಎಂದು ಹರಿಹಾಯ್ದರು. ಬರ ಪರಿಹಾರದ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, "ನಾವು ಸರ್ಕಾರ ನಡೆಸ್ತಾ ಇದ್ದು ಒಂದು ವರ್ಷ ಆಯ್ತು, ಕೇಂದ್ರ ಸರ್ಕಾರದ ಹತ್ತು ವರ್ಷಗಳಲ್ಲಿ ಯಾವುದೇ ಲೋಪ ದೋಷಗಳು ಇಲ್ವಾ. ಬೆಲೆ ಏರಿಕೆ, ಎಂಪ್ಲಾಯಮೆಂಟ್, ಜಿಡಿಪಿ ಇವು ಯಾವುದು ಅವರಿಗೆ ಕಾಣ್ತಿಲ್ವಾ" ಎಂದು ಪ್ರಶ್ನಿಸಿದರು.

# 'ಸಿಎಂ-ಡಿಸಿಎಂ ಬೇಡಿಕೆ: ಆಡಳಿತ ವ್ಯವಸ್ಥೆ ಮೇಲೆ ದುಷ್ಪರಿಣಾಮ'

**ಹುಬ್ಬಳ್ಳಿ :** 'ರಾಜ್ಯದ ಕಾಂಗ್ರೆಸ್ ಸರ್ಕಾರದಲ್ಲಿ ಮುಖ್ಯಮಂತ್ರಿ ಹುದ್ದೆಯ ಕಿತ್ತಾಟ ತಾರಕಕ್ಕೇರಿದೆ. ಪಕ್ಷದ ಹೈಕಮಾಂಡ್ ಯಾವುದನ್ನೂ ಸ್ಪಷ್ಟವಾಗಿ ಹೇಳುತ್ತಿಲ್ಲ. ಸಿದ್ದರಾಮಯ್ಯ ಅವರನ್ನು ಕಟ್ಟಿಹಾಕುವ ಕೆಲಸ ನಡೆದಿದೆ. ಇಂತಹ ಪರಿಸ್ಥಿತಿಯಿಂದ ಸರ್ಕಾರ ಮತ್ತು ಆಡಳಿತ ವ್ಯವಸ್ಥೆ ಹದಗೆಡುತ್ತದೆ' ಎಂದು ಸಂಸದ ಜಗದೀಶ ಶೆಟ್ಟರ್ ಪ್ರತಿಕ್ರಿಯಿಸಿದರು.

ನಗರದಲ್ಲಿ ಶುಕ್ರವಾರ ಸುದ್ದಿಗಾರರ ಜೊತೆ ಮಾತನಾಡಿದ ಅವರು, 'ಮೂರು ಉಪಮುಖ್ಯಮಂತ್ರಿ ಹುದ್ದೆ ಸೃಷ್ಟಿಸಬೇಕು ಎನ್ನುವ ಕೂಗಿನ ಜೊತೆಗೆ ಈಗ ಮುಖ್ಯಮಂತ್ರಿ ಬದಲಾವಣೆ ಆಗಬೇಕೆಂದು ಎಂಬ ಗೊಂದಲ ನಿರ್ಮಿಸಲಾಗುತ್ತಿದೆ. ಯಾರ ಮನದಲ್ಲಿ ಏನಿದೆ ಎಂಬುದನ್ನು ಬೇರೆಯವರಿಂದ ಹೇಳಿಸುವ ಪ್ರಯತ್ನ ನಡೆದಿದೆ. ಏನಿದ್ದರೂ ನೇರವಾಗಿ ಹೈಕಮಾಂಡ್ ಮುಂದೆ ಹೇಳಬೇಕು' ಎಂದರು.

'ಮುಖ್ಯಮಂತ್ರಿ ಹುದ್ದೆಗೆ ಮೊದಲಿನಿಂದಲೂ ಗುದ್ದಾಟವಿದ್ದು, ಮುಂದುವರಿದಿದೆ. ಬಿಜೆಪಿ ಆಪರೇಷನ್ ಕಮಲ ಮಾಡಬೇಕಿಲ್ಲ. ಕಾಂಗ್ರೆಸ್‌ನ ಒಳಬೇಗುದಿ ಮತ್ತು ಶಾಸಕರ ಅಸಮಾಧಾನವು ಸರ್ಕಾರದ ಮೇಲೆ ದುಷ್ಪರಿಣಾಮ ಬೀರಲಿದೆ' ಎಂದರು.

# ಸಮರ್ಪಕ ಬಿಸಿ ಊಟ ನೀಡದಕ್ಕೆ ಪ್ರತಿಭಟನೆ



**ದೇವರಹಿಪ್ಪರಗಿ :** ವಿಜಯಪುರ ಜಿಲ್ಲೆಯ ದೇವರಹಿಪ್ಪರಗಿ ತಾಲೂಕಿನ ಮಣೂರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಪ್ರಭಾರ ಮುಖ್ಯ ಶಿಕ್ಷಕಿ ಜಯಶ್ರೀ ನಾಯಕ ರವರು ಮಕ್ಕಳಿಗೆ ಬಿಸಿ ಊಟ ಸರಿಯಾಗಿ ನೀಡುತ್ತಿಲ್ಲ, ಹಾಗೂ ಶಾಲೆಗೆ ಸಮಯಕ್ಕೆ ಸರಿಯಾಗಿ ಶಿಕ್ಷಕಿ ಬಾರದೇ ಇರುವುದರಿಂದ, ಇಂತಹ ಶಿಕ್ಷಕಿಯರು ನಮಗೆ ಅವಶ್ಯಕತೆ ಇಲ್ಲ ಕೂಡಲೇ ಇವರನ್ನು ಬೇರೆಡೆ ವರ್ಗಾವಣೆ ಮಾಡಬೇಕು ಎಂದು ಶಾಲಾ ಮಕ್ಕಳು,ಪಾಲಕರು,ಸ್ಥಳೀಯರು ಪ್ರಭಾರಿ ಮುಖ್ಯ ಶಿಕ್ಷಕಿ ಜಯಶ್ರೀ ನಾಯಕ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿ ಶಾಲೆಯ ಮುಂದಗಡೆ ಪ್ರತಿಭಟನೆ ಮಾಡಿದರು.

ಸಮಯಕ್ಕೆ ಸರಿಯಾಗಿ ಶಾಲೆಗೆ ಬಾರದೆ ಮನಸ್ಸೋ ಇಚ್ಛೆ ಶಾಲೆಗೆ ಬರುವ ಇಂತಹ ಶಿಕ್ಷಕಿ ನಮ್ಮ ಶಾಲೆಗೆ ಈ ಶಿಕ್ಷಕಿ ಜಯಶ್ರೀ ನಾಯಕ ಬೇಡವೇ ಬೇಡ, ಮಕ್ಕಳ ಹಿತ ಕಾಪಾಡದ ಶಿಕ್ಷಕಿ ನಮ್ಮೂರ ಶಾಲೆಗೆ ಬೇಡ ಬೇರೆ ಕಡೆಗೆ ಎಂದು ಮಕ್ಕಳು, ಪಾಲಕರು ಘೋಷಣೆ ಕೂಗಿ ಬೇರೆ ಮುಖ್ಯ ಶಿಕ್ಷಕರನ್ನು ನೇಮಕ ಮಾಡಬೇಕು,ಎಂದು ಪ್ರತಿಭಟನೆ ನಡೆಸಿದರು. ನಂತರ ಸ್ಥಳಕ್ಕೆ ಕ್ಷೇತ್ರ ಶಿಕ್ಷಣಾಧಿಕಾರಿ ಆರೀಫ್ ಬಿರಾದಾರ ಭೇಟಿ ನೀಡಿ, ಮಕ್ಕಳು ಹಾಗೂ ಪಾಲಕರ ಮನವೊಲಿಸಲು ಮುಂದಾಗಿದ್ದಾರೆ.

ಶಿಕ್ಷಕಿ ಜಯಶ್ರೀ ನಾಯಕ ರವರಿಗೆ ತರಾಟೆಗೆ ತೆಗೆದು-ಕೊಂಡರು. ಪಾಲಕರ ಹಾಗೂ ವಿದ್ಯಾರ್ಥಿಗಳ ಸಮಸ್ಯೆಗೆ ಸ್ಪಂದಿಸಿ ಪ್ರಾಬಾರಿ ಮುಖ್ಯ ಶಿಕ್ಷಕಿಯಾದ ಜಯಶ್ರೀ ನಾಯಕ ಸ್ಥಾನವನ್ನು ಎಸ್ ಎಚ್ ಬಿರಕಗಡ್ಡಿ ಯವರಿಗೆ ಪ್ರಭಾರ ಮುಖ್ಯ ಶಿಕ್ಷಕರನ್ನಾಗಿ ನೇಮಿಸಿದರು. ಅದೇ ರೀತಿಯಾಗಿ ಶಿಕ್ಷಕಿಯರಾದ ಜಯಶ್ರೀ ರವರಿಗೆ ಸರಿಯಾದ ಸಮಯಕ್ಕೆ ಶಾಲೆಗೆ ಬರಬೇಕು, ಇಲ್ಲವಾದಲ್ಲಿ ನಿಮ್ಮ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು.ನಂತರ ಪ್ರತಿಭಟನೆ ಹಿಂಪಡೆಯಲಾಯಿತು.

ಈ ಸಂದರ್ಭದಲ್ಲಿ ಎಸ್ಡಿಎಂಸಿ ಅಧ್ಯಕ್ಷರಾದ ಸೋಮಯ್ಯ ನಂದಿಕೋಲ, ಆನಂದ ಪೂಜಾರಿ, ರಾಮು ಸಿಂದಗಿ, ಅಶೋಕ ಮಣೂರ, ರವಿ ಸಿಂದಗಿ, ಹಣಮಂತ ವಾಲಿಕಾರ, ಅಬ್ಬಾಸಲಿ ಭಾಗವಾನ, ಶಾಂತು ಬಜೆಂತ್ರಿ, ರವಿ ತಳವಾರ, ವಿದ್ಯಾರ್ಥಿಗಳಾದ ರಕ್ಷಿತಾ ಜೋಗೂರ, ಹಣಮಂತ ಹಿರೇಕುರುಬರ, ರೂಪಾ ಬೆನಾಳ, ಚಂದ್ರಿಕಾ ಮರಾಠಿ, ಪೂಜಾ ಕನ್ನೊಳ್ಳಿ, ಸಂಕೇತ ಸಿಂದಗಿ, ಐಶ್ವರ್ಯ ಹಡಪದ, ನಿಂಗರಾಜ ನಾಗಾವಿ, ಇನ್ನು ಅನೇಕ ಮಕ್ಕಳು ಇದ್ದರು.

# ನಾನು ಸಹ ಮುಖ್ಯಮಂತ್ರಿ ಸ್ಥಾನಕ್ಕೆ ಕ್ಲೇಮ್ ಮಾಡುತ್ತೇನೆ: ಸಚಿವ ಸತೀಶ್ ಜಾರಕಿಹೊಳಿ



**ಚಿಕ್ಕೋಡಿ (ಬೆಳಗಾವಿ) :** ರಾಜ್ಯದಲ್ಲಿ ಸದ್ಯ ಮುಖ್ಯಮಂತ್ರಿ ಬದಲಾವಣೆ ಮುಗಿದು ಹೋಗಿರುವ ಅಧ್ಯಾಯ. 2028ರ ಚುನಾವಣೆ ಬಳಿಕ ಪರಿಸ್ಥಿತಿ, ಸನ್ನಿವೇಶ ನೋಡಿಕೊಂಡು ಮುಖ್ಯಮಂತ್ರಿ ಸ್ಥಾನಕ್ಕೆ ಕ್ಲೇಮ್ ಮಾಡುತ್ತೇನೆ. ಆದರೆ, ಅದು ಈಗಲ್ಲ ಎಂದು ಲೋಕೋಪಯೋಗಿ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಸ್ಪಷ್ಟಪಡಿಸಿದರು.

ಚಿಕ್ಕೋಡಿ ಪಟ್ಟಣದಲ್ಲಿ ಶನಿವಾರ ಮಾಧ್ಯಮಗಳೊಂದಿಗೆ ಮಾತನಾಡುತ್ತಾ ಮುಖ್ಯಮಂತ್ರಿ ಬದಲಾವಣೆ ವಿಚಾರವಾಗಿ ಕೇಳಲಾದ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಅವರು, ಈಗಾಗಲೇ ಎಲ್ಲರೂ ಈ ವಿಚಾರವಾಗಿ ಮಾತನಾಡಿದ್ದಾರೆ. ಅದು ಮುಗಿದು ಹೋಗಿದೆ. ಅದನ್ನೇ ಪುನರಾವರ್ತನೆ ಮಾಡುವುದರಲ್ಲಿ ಅವಶ್ಯಕತೆ ಇಲ್ಲ. ದೆಹಲಿ, ಬೆಂಗಳೂರಲ್ಲೂ ಈ ಬಗ್ಗೆ ಸ್ಪಷ್ಟನೆ ನೀಡಲಾಗಿದೆ. ಆದರೂ, ದಿನವೂ ಅದನ್ನೇ ಮುಂದುವರೆಸುವುದು ಅಗತ್ಯವಿಲ್ಲ. ಬೇರೆ-ಬೇರೆ ವಿಚಾರಗಳು ಇವೆ ಎಂದರು.

ವೈಯಕ್ತಿಕವಾಗಿ ಹೇಳಿದರೆ, ಮಹತ್ವ ಇಲ್ಲ: ಮುಂದುವರೆದು, ಸಿಎಂ ಬದಲಾವಣೆಯು ಮುಗಿದು ಹೋದ ಅಧ್ಯಾಯ. ಅದನ್ನು ರಸ್ತೆಯಲ್ಲಿ ಚರ್ಚೆ ಮಾಡಲು ಆಗಲ್ಲ. ಹೈಕಮಾಂಡ್ ಇದೆ, ಪಕ್ಷವಿದ್ದು, ಅದು ಅವರ ತೀರ್ಮಾನ. ಯಾರೋ, ಎಲ್ಲೋ ಮಾಡಲು ಆಗಲ್ಲ. ಪಕ್ಷದ ವರಿಷ್ಠರು, ಶಾಸಕಾಂಗ ಪಕ್ಷ ಇದೆ. ಅಲ್ಲಿಯೇ ಚರ್ಚೆ ಆಗಬೇಕು. ಅಲ್ಲಿಯೇ ತೀರ್ಮಾನವಾಗಬೇಕು. ಹೊರಗಡೆ ಯಾವುದೋ ಸಭೆ, ಸಮಾರಂಭಗಳಲ್ಲಿ, ನಾನು ವೈಯಕ್ತಿಕವಾಗಿ ಹೇಳಿದರೆ, ಅದಕ್ಕೆ ಮಹತ್ವ ಇಲ್ಲ ಎಂದು ವಿವರಿಸಿದರು.

ದಲಿತ ಸಿಎಂ ವಿಚಾರ ರಾಹುಲ್ ಬಳಿ ಕೇಳುವ ಪ್ರಶ್ನೆ: ದಲಿತ ಸಿಎಂ ವಿಚಾರವಾಗಿಯೂ ಪ್ರತಿಕ್ರಿಯಿಸಿ, ನೀವು ಹೀಗೆ ಹೊಸ ಏನೇನೋ ಕೇಳಿಕೊಳ್ಳುತ್ತಾ ಹೋದರೆ, ಅದಕ್ಕೆಲ್ಲ ಹೇಳಲು ಆಗಲ್ಲ. ಇದು ವರಿಷ್ಠರು, ಸಿದ್ದರಾಮಯ್ಯ, ರಾಹುಲ್ ಗಾಂಧಿ ಅವರ ಬಳಿ ಕೇಳುವ ಪ್ರಶ್ನೆ. ನನಗಲ್ಲ. ನಮ್ಮದೇ ನಿಂದ್ರು ಹೊಸ ಅಭಿವೃದ್ಧಿ, ಕೆಲಸಕ್ಕೆ ಅಷ್ಟೇ ಮಾತ್ರ ಸೀಮಿತ ಎಂದು ತಿಳಿಸಿದರು.

ಚುನಾವಣೆ ಮುಂಚೆ ಡಿಸಿಎಂ ಕೂಗಿತ್ತು: ಇದೇ ವೇಳೆ, ಡಿಸಿಎಂ ಹೆಚ್ಚಳದ ಬೇಡಿಕೆ ವಿಚಾರವಾಗಿ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಇದು ಕೂಡ ಮುಗಿದು ಹೋದ ಅಧ್ಯಾಯ. ವರಿಷ್ಠರೇ ಇದರ ತೀರ್ಮಾನ ಮಾಡಬೇಕು. ನಾವು ತೀರ್ಮಾನ ಮಾಡಲು ಆಗಲ್ಲ. ನಾವು ಹೇಳಲು ಆಗಲ್ಲ.

ಚುನಾವಣೆ ಮುಂಚೆ ಆ ಕೂಗಿತ್ತು ಎಂದು ಸತೀಶ್ ಜಾರಕಿಹೊಳಿ ಹೇಳಿದರು.

ಬೆಳಗಾವಿ ಜಿಲ್ಲೆ ವಿಭಜನೆ ವಿಚಾರವಾಗಿ ಮಾತನಾಡಿ, ಈ ಕುರಿತು ನಾವು ಸಹ ಪ್ರಯತ್ನ ಮಾಡುತ್ತಿದ್ದೇವೆ. ಧ್ವನಿ ಕೂಡ ಎತ್ತಿದ್ದೇವೆ. ಅವಕಾಶ ಬಂದೇ ಬರುತ್ತೆ ಎಂಬ ನಂಬಿಕೆ ಇದೆ. ಕಾದು ನೋಡಬೇಕು. ಸರ್ಕಾರದ ಮೇಲೆ ಒತ್ತಡ ಹಾಕಿದ್ದೀವಿ ಎಂದರು.

## ಪಿ.ಸಿ.&ಪಿ.ಎನ್.ಡಿ.ಟಿ ಜಿಲ್ಲಾ ಮಟ್ಟದ ಸಲಹಾ ಸಮಿತಿ ಸಭೆ

# ಭ್ರೂಣ ಹತ್ಯೆ ಹಾಗೂ ಲಿಂಗ ಅಸಮಾನತೆ ತಡೆಯುವುದು ಕಾಯ್ದೆಯ ಮೂಲ ಉದ್ದೇಶ: ಡಿ.ಎಚ್.ಒ ಡಾ. ಲಿಂಗರಾಜು ಟಿ.



**ಕೊಪ್ಪಳ :** ಜಿಲ್ಲೆಯಲ್ಲಿ ಭ್ರೂಣ ಹತ್ಯೆ ಮತ್ತು ಲಿಂಗ ಅಸಮಾನತೆತಡೆಯುವುದುಪಿ.ಸಿ.&ಪಿ.ಎನ್.ಡಿ.ಟಿ ಕಾಯ್ದೆಯ ಮೂಲ ಉದ್ದೇಶವಾಗಿದ್ದು, ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಲಿಂಗರಾಜು ಟಿ. ಅವರು ಹೇಳಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಾಲಯದಲ್ಲಿ ಆಯೋಜಿಸಲಾಗಿದ್ದ ಪಿ.ಸಿ.&ಪಿ.ಎನ್.ಡಿ.ಟಿ ಜಿಲ್ಲಾ ಮಟ್ಟದ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮೊದಲ ಮಗು ಹೆಣ್ಣಾದಲ್ಲಿ ಎರಡನೇ ಮಗು ಗಂಡಾಗಬೇಕೆಂದು ಬಹಳಷ್ಟು ಪೋಷಕರು, ಕುಟುಂಬದವರು ಬಯಸುತ್ತಾರೆ. ಇದರ ಬಗ್ಗೆ ಮುಂಚಿತವಾಗಿ ತಿಳಿಯಲು ಗರ್ಭಿಣಿಯ ಸ್ಕ್ಯಾನಿಂಗ್ ಸಮಯದಲ್ಲಿ ರೇಡಿಯೋಲಾಜಿಸ್ಟ್‌ಗಳಿಗೆ ಮನವಿ ಮಾಡಬಹುದು. ಅಥವಾ ಕೆಲವು ಸ್ಕ್ಯಾನಿಂಗ್ ಸೆಂಟರ್‌ಗಳಲ್ಲಿ ಪ್ರಸವ ಪೂರ್ವ ಲಿಂಗಪತ್ತೆ ಕಾರ್ಯ ನಡೆಯುತ್ತಿರಬಹುದು. ಇದನ್ನು ಪತ್ತೆಹಚ್ಚಲು ಪಿ.ಸಿ.&ಪಿ.ಎನ್.ಡಿ.ಟಿ ಜಿಲ್ಲಾ ಮಟ್ಟದ ಸಲಹಾ ಸಮಿತಿಯ ಸದಸ್ಯರು ತಂಡವಾಗಿಅಥವಾವೈಯಕ್ತಿಕವಾಗಿಯಾವುದೇ ಸ್ಕ್ಯಾನಿಂಗ್‌ಸೆಂಟರ್‌ನಲ್ಲಿಗೌಪ್ಯಕಾರ್ಯಾಚರಣೆ ನಡೆಸಿ, ನೈಜತೆ ಪರೀಕ್ಷೆ ಮಾಡಬಹುದು. ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆ ಹಾಗೂ ಭ್ರೂಣ ಹತ್ಯೆ ಕಾನೂನು ಬಾಹಿರ ಹಾಗೂ ಗಂಭೀರ ಅಪರಾಧವಾಗಿದ್ದು, ಈ ಬಗ್ಗೆ ಎಲ್ಲ ಸ್ಕ್ಯಾನಿಂಗ್ ಸೆಂಟರ್‌ಗಳಲ್ಲಿ ಪೋಸ್ಟರ್‌ಗಳ ಮೂಲಕ ಜಾಗೃತಿ ಮೂಡಿಸಲಾಗಿದೆ. ಆದಾಗ್ಯೂ ಅಲ್ಲಲ್ಲಿ ಕಾಯ್ದೆ ವಿರುದ್ಧವಾದ ಆರೋಪಗಳು ಕೇಳಿ ಬರುತ್ತವೆ. ಇದಕ್ಕಾಗಿ ಕೇವಲ ಸಮಿತಿ ಸದಸ್ಯರು ಮಾತ್ರವಲ್ಲದೆ ಯಾವುದೇ ಸಾರ್ವಜನಿಕರು ಗೌಪ್ಯಕಾರ್ಯಾಚರಣೆ ಮೂಲಕ ಸಾಕ್ಷಿಸಮೇತ ಪ್ರಕರಣವನ್ನುಪತ್ತೆಹಚ್ಚಿ,ದೂರುಸಲ್ಲಿಸಬಹುದು ಅಥವಾ ಸಂಬಂಧಿಸಿದ ಇಲಾಖೆಗೆ ಮಾಹಿತಿ ನೀಡಬಹುದು.

ಇದುವರೆಗೂ ಜಿಲ್ಲೆಯಲ್ಲಿ ಇಂತಹ ಯಾವುದೇ ಪ್ರಕರಣ ವರದಿಯಾಗಿಲ್ಲವಾದರೂ ಮುಂದಿನ ದಿನಗಳಲ್ಲಿಇಂತಹಪ್ರಕರಣಗಳುನಡೆಯದಂತೆ, ಹೆಣ್ಣು ಭ್ರೂಣ ಹತ್ಯೆ ತಡೆದು ಲಿಂಗ ಸಮಾನತೆ ಸಾಧಿಸುವಲ್ಲಿನಾವೆಲ್ಲರೂಒಟ್ಟಾಗಿಶ್ರಮಿಸಬೇಕು ಎಂದು ಅವರು ಹೇಳಿದರು.

ಯಾವುದೇ ಸ್ಕ್ಯಾನಿಂಗ್ ಸೆಂಟರ್‌ಗಳಲ್ಲಿ ಕಾನೂನು ಬಾಹಿರವಾಗಿ ಪ್ರಸವ ಪೂರ್ವ ಭ್ರೂಣಲಿಂಗಪತ್ತೆಪ್ರಕರಣಗಳುಕಂಡುಬಂದಲ್ಲಿ ಸಾರ್ವಜನಿಕರು ಆರೋಗ್ಯ ಇಲಾಖೆ ಅಥವಾ ಪೊಲೀಸ್ ಇಲಾಖೆಗೆ ಮಾಹಿತಿ ನೀಡಬಹುದು. ಮಾಹಿತಿಆಧರಿಸಿನಡೆಸಿದತನಿಖೆಯಲ್ಲಿಪ್ರಕರಣ ಸಾಬೀತಾದಲ್ಲಿ ಮಾಹಿತಿದಾರರ ಗೌಪ್ಯತೆಯನ್ನು ಕಾಪಾಡುವುದರ ಜೊತೆಗೆ ರೂ.1 ಲಕ್ಷಗಳ ಬಹುಮಾನವನ್ನು ಸಹ ನೀಡಲಾಗುವುದು. ಇದುವರೆಗೂರೂ.50,000ರಷ್ಟಿದ್ದಬಹುಮಾನ ಮೊತ್ತವನ್ನು ಭ್ರೂಣ ಲಿಂಗ ಹತ್ಯೆಯನ್ನು ಪರಿಣಾಮಕಾರಿಯಾಗಿ ತಡೆಯುವ ಹಾಗೂ ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವ ಉದ್ದೇಶದಿಂದ ರೂ.1 ಲಕ್ಷಕ್ಕೆ ಹೆಚ್ಚಿಸಿ ಸರ್ಕಾರ ಆದೇಶಿಸಿದೆ. ಆದ್ದರಿಂದ ಜಿಲ್ಲೆಯ ಯಾವುದೇ ಸಾರ್ವಜನಿಕರಿಗೆ, ಅಧಿಕಾರಿಗಳಿಗೆ ಭ್ರೂಣ ಲಿಂಗ ಪತ್ತೆ ಕುರಿತು ಗೊತ್ತಾದಲ್ಲಿ ಯಾವುದೇ ಸಮಯದಲ್ಲಿಸಂಬಂಧಿಸಿದಇಲಾಖೆಗೆಮಾಹಿತಿ ನೀಡಬಹುದು ಎಂದು ಅವರು ತಿಳಿಸಿದರು.

ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ರವೀಂದ್ರನಾಥ ಎಂ.ಎಚ್ ಅವರು ಮಾತನಾಡಿ, ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲ ಸ್ಕ್ಯಾನಿಂಗ್ ಸೆಂಟರ್‌ಗಳಲ್ಲಿ ಫಾರಂ-ಎಫ್ ಸೇರಿದಂತೆ ಎಲ್ಲ ಅಗತ್ಯ ದಾಖಲಾತಿಗಳ ನಿರ್ವಹಣೆ ಕಡ್ಡಾಯ. ಎಲ್ಲ ಸ್ಕ್ಯಾನಿಂಗ್ ಸೆಂಟರ್‌ಗಳು ಪಿ.ಸಿ & ಪಿ.ಎನ್.ಡಿ.ಟಿಕಾಯ್ದೆಯಡಿನಿಯಮಾನುಸಾರ ನೋಂದಣಿ ಮಾಡಿಕೊಳ್ಳಬೇಕು ಹಾಗೂ ನೋಂದಣಿ ಅವಧಿ ಪೂರ್ಣಗೊಳ್ಳುವುದಕ್ಕಿಂತ ಮೂರು ತಿಂಗಳ ಮುಂಚೆ ಅರ್ಜಿ ಸಲ್ಲಿಸಿ ನವೀಕರಣ ಮಾಡಿಕೊಳ್ಳಬೇಕು. ಸ್ಕ್ಯಾನಿಂಗ್ ಕುರಿತಾದ ಮಾರ್ಗಸೂಚಿಗಳನ್ನು ಪಾಲಿಸಿ ನಿಗದಿತ ನಮೂನೆಗಳನ್ನು ನಿರ್ವಹಿಸಬೇಕು. ನೋಂದಣಿ,

ಪರವಾನಗಿ ನವೀಕರಣವಿಲ್ಲದ ಆರೋಗ್ಯ ಸಂಸ್ಥೆಗಳ ಮೇಲೆ ಹಾಗೂ ನಿಗದಿತ ನಿಯಮ ಪಾಲನೆಹಾಗೂದಾಖಲಾತಿಗಳನ್ನುನಿರ್ವಹಿಸದ ಆರೋಗ್ಯ ಸಂಸ್ಥೆಗಳನ್ನು ಮುಚ್ಚಿಸಲು ಅಥವಾ ಸ್ಥಗಿತಗೊಳಿಸಲು ಕಾಯ್ದೆಯಡಿ ಅವಕಾಶವಿರುತ್ತದೆ. ಪಿ.ಸಿ & ಪಿ.ಎನ್.ಡಿ.ಟಿ ಕಾಯ್ದೆಯನ್ನು ಜಿಲ್ಲೆಯಲ್ಲಿ ಸಮರ್ಪಕವಾಗಿ ಅನುಷ್ಠಾನಮಾಡಲಾಗುತ್ತಿದ್ದು,ಎಲ್ಲಸ್ಕ್ಯಾನಿಂಗ್ ಸೆಂಟರ್‌ಗಳು ಕಾಯ್ದೆ ಪಾಲನೆ ಜೊತೆಗೆ ನಿಯಮಾನುಸಾರ ನೋಂದಣಿ, ನವೀಕರಣಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಪಿ.ಸಿ ಮತ್ತು ಪಿ.ಎನ್.ಡಿ.ಟಿ ಕಾಯ್ದೆ ಅನುಸಾರ ಗರ್ಭಪೂರ್ವ ಮತ್ತು ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆ ನಿಷೇಧಿಸಲಾಗಿದೆ. ಸರ್ಕಾರಿ ಅಥವಾ ಖಾಸಗಿ ಯಾವುದೇ ವೈದ್ಯರು ಇಂತಹ ಕೃತ್ಯಗಳಲ್ಲಿ ಭಾಗಿಯಾದಲ್ಲಿ ಅವರಿಗೆ ಕಾರಾಗೃಹ ಶಿಕ್ಷೆ ಸಹಿತ ದಂಡವನ್ನು ವಿಧಿಸಲಾಗುವುದು. ಮೊದಲ ಅಪರಾಧಕ್ಕೆ 5 ವರ್ಷ ವೈದ್ಯಕೀಯ ಪರವಾನಿಗೆಯನ್ನು ರದ್ದುಪಡಿಸುವುದು. ನಂತರದ ಅಪರಾಧಕ್ಕೆ ಸಂಬಂಧಿಸಿದ ವೈದ್ಯರ ವೈದ್ಯಕೀಯ ಪರವಾನಿಗೆಯನ್ನು ರಾಜ್ಯ ವೈದ್ಯಕೀಯ ಮಂಡಳಿಯಿಂದ ಶಾಶ್ವತವಾಗಿ ತೆಗೆದು ಹಾಕಿ, ವೈದ್ಯಕೀಯ ವೃತ್ತಿ ನಡೆಸಲು ಆಜೀವ ನಿಷೇಧ ಹೇರಲಾಗುವುದು. ಒಂದು ವೇಳೆ ಸ್ವತಃ ಮಹಿಳೆ, ಆಕೆಯ ಪತಿ ಅಥವಾ ಸಂಬಂಧಿಕರು ಭ್ರೂಣ ಲಿಂಗ ಪತ್ತೆಗೆ ಯತ್ನಿಸಿ, ವೈದ್ಯರಿಗೆಒತ್ತಡಹೇರಿದಲ್ಲಿಅವರಿಗೆಮೂರರಿಂದ ಐದು ವರ್ಷಗಳವರೆಗೆ ಜೈಲು ಶಿಕ್ಷೆ ಹಾಗೂ ರೂ.50ಸಾವಿರದಿಂದ1ಲಕ್ಷದವರೆಗೆದಂಡವನ್ನು ವಿಧಿಸಲು ಅವಕಾಶವಿದೆ. ಖಾಸಗಿ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಬರುವ ಅಪ್ರಾಪ್ತ ವಯಸ್ಸಿನ ಗರ್ಭಿಣಿಯರು ಅಥವಾ ಬಾಲ ಗರ್ಭಿಣಿಯರ ಬಗ್ಗೆಆರೋಗ್ಯಇಲಾಖೆಗೆಕಡ್ಡಾಯವಾಗಿಮಾಹಿತಿ ನೀಡಬೇಕು. ಅಪ್ರಾಪ್ತ ವಯಸ್ಸಿನ ಗರ್ಭಿಣಿಯರ ಗರ್ಭಧಾರಣೆ ಹಾಗೂ ಗರ್ಭಪಾತ ಎರಡೂ ತಾಯಿ ಹಾಗೂ ಮಗುವಿನ ಆರೋಗ್ಯದ ಮೇಲೆ ಗಂಭೀರಪರಿಣಾಮಬೀರುವುದರಿಂದ ಇಂತಹ ಪ್ರಕರಣಗಳನ್ನು ಖಾಸಗಿ ವೈದ್ಯಾಧಿಕಾರಿಗಳು, ಸ್ಕ್ಯಾನಿಂಗ್ ಸೆಂಟರ್‌ಗಳು ಕಡ್ಡಾಯವಾಗಿ ವರದಿ ಮಾಡಬೇಕು ಎಂದು ಸಭೆಗೆ ತಿಳಿಸಿದರು.

ಜಿಲ್ಲೆಯ ವಿವಿಧ ಸರ್ಕಾರಿ ಹಾಗೂ ಖಾಸಗಿ ಆರೋಗ್ಯ ಸಂಸ್ಥೆಗಳ ನೋಂದಣಿ, ನವೀಕರಣ ಹಾಗೂಹೊಸಅರ್ಜಿಗಳಿಗೆಅನುಮತಿಕುರಿತಂತೆ ಚರ್ಚಿಸಲಾಯಿತು.

ಸಭೆಯಲ್ಲಿ ಸಮಿತಿಯ ಸದಸ್ಯರುಗಳಾದ ಸ್ತ್ರೀ ರೋಗ ತಜ್ಞರಾದ ಡಾ.ಈಶ್ವರ ಸವಡಿ, ಮಕ್ಕಳ ತಜ್ಞರಾದ ಡಾ.ಶಶಿಕಾಂತ್, ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಡಾ.ಶ್ರೀನಿವಾಸ ಹ್ಯಾಟಿ, ಜಿಲ್ಲಾ ಯೂನಿಸೆಫ್ ಸಂಯೋಜಕರಾದಹರೀಶ್‌ಜೋಗಿಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಮಾದಕ ವಿರೋಧಿ ದಿನ ಆಚರಣೆ



**ಮೂಡಲಗಿ :** ಶ್ರೀ ಕ್ಷೇತ್ರ ಧರ್ಮಸ್ಥಳ ಮಂಜುನಾಥ ಗ್ರಾಮಿಣಾಭೀವೃದ್ದಿ ಯೋಜನೆಯಿಂದ ಮೂಡಲಗಿ ತಾಲೂಕು ಹಳ್ಳೂರಿನ ಎಸ್. ಆರ್ ಸಂತಿ ಪದವಿ ಪೂರ್ವ ಕಾಲೇಜಿನಲ್ಲಿ ಮಾದಕ ವಿರೋಧಿ ದಿನಾಚರಣೆಯನ್ನು ಆಚರಿಸಲಾಯಿತು.

ಸದರಿ ಕಾರ್ಯಕ್ರಮವನ್ನು ಪ್ರಾಂಶುಪಾಲ ವೈ. ಬಿ ಕಳ್ಳಿಗುದ್ದಿ ಅವರು ಗಿಡಕ್ಕೆ ನೀರುಣಿಸುವುದರ ಮೂಲಕ ಚಾಲನೆಯನ್ನು ನೀಡಿದರು.

ಪ್ರಾಸ್ತಾವಿಕವಾಗಿ ಕ್ಷೇತ್ರ ಧರ್ಮಸ್ಥಳ ಗ್ರಾಮಅಭಿವೃದ್ಧಿ ಯೋಜನೆ ಕಾರ್ಯಕ್ರಮದ ಕುರಿತಾಗಿ ಜ್ಞಾನವಿಕಾಸ ಸಮನ್ವಯ ಅಧಿಕಾರಿ ವಿಜಯಲಕ್ಷ್ಮಿ ಮಾಹಿತಿ ನೀಡಿದರು.

ಸಂಪನ್ಮೂಲ ವ್ಯಕ್ತಿ ಪ್ರಾರ್ಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿ ಜಾನಕಿ ಮಾದಕ ವಸ್ತುಗಳಿಂದ ದೂರವಿರುವ ಕುರಿತು ಅದರಿಂದ ಆಗುವ ದುಷ್ಪರಿಣಾಮಗಳ ಕುರಿತು ಮಾಹಿತಿಯನ್ನು ನೀಡಿದರು. ಕಾರ್ಯಕ್ರಮದಲ್ಲಿ ಪದವಿ ಪೂರ್ವ ವಿದ್ಯಾರ್ಥಿಗಳ ಭಾಗವಹಿಸಿದ್ದರು.

# ವಲಯಅರಣ್ಯಾಧಿಕಾರಿ ಸಂಜೀವ ಸವಸುದ್ದಿ ಅಭಿಪ್ರಾಯ
# 'ನಾಳಿನ ಭವಿಷ್ಯಕ್ಕಾಗಿ ಪರಿಸರ ಸಂರಕ್ಷಣೆ ಮಾಡಬೇಕು'

**ಮೂಡಲಗಿ :** 'ಪರಿಸರ ನಾಶದಿಂದಜೀವ 'ಸಂಕುಲದಅವನತಿಯತ್ತ ಸಾಗುತ್ತಲಿದ್ದು, ಪ್ರತಿಯೊಬ್ಬರುಗಿಡ, ಮರಗಳನ್ನು ಸಂರಕ್ಷಿಸಿ ಬೆಳೆಸುವುದು ಇಂದಿನ ಅವಶ್ಯಕತೆಇದೆ' ಎಂದು ಗೋಕಾಕ ವಲಯಅರಣ್ಯಾಧಿಕಾರಿ ಸಂಜೀವ ಸವಸುದ್ದಿ ಅವರು ಹೇಳಿದರು. ಇಲ್ಲಿಯ ಕಲ್ಮೇಶ್ವರ ಶಿಕ್ಷಣ ಸಂಸ್ಥೆಯ ಶ್ರೀಮತಿ ಉಮಾಬಾಯಿ ಸ್ವಾಮಿ ಪ್ರೌಢ ಶಾಲೆ ಹಾಗೂ ಶ್ರೀಪಾದಬೋಧ ಸ್ವಾಮಿಕನ್ನಡ ಮಾಧ್ಯಮ ಪ್ರಾಥಮಿಕ ಶಾಲೆಯಲ್ಲಿ ವಲಯ ಅರಣ್ಯ ಇಲಾಖೆಯವರ ಸಹಯೋಗದಲ್ಲಿ ಗುರುವಾರ ಆಚರಿಸಿದ ವನ ಮಹೋತ್ಸವವನ್ನು ಸಸಿಗೆ ನೀರೂಣಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಅಭಿವೃದ್ಧಿ ನೆಪದಲ್ಲಿ ಪ್ರಕೃತಿಯ ಮೇಲೆ ನಿರಂತರವಾಗಿ ದಾಳಿಯಾಗುತ್ತಿದ್ದು ಇದು ಮುಂದಿನ ಪೀಳಿಗೆಗೆ ಅಪತ್ತುತರುವಂತ ಸಂಗತಿಯಾಗಿದೆ

ಶಾಲಾ ಮಕ್ಕಳು ಒಂದು ಸಸಿಯನ್ನು ನೆಟ್ಟು ಬೆಳೆಸುವ ಮೂಲಕ ಪರಿಸರಕ್ಕೆ ಕೊಡುಗೆಯನ್ನು ನೀಡಿರಿ ಎಂದರು.



ಅಧ್ಯಕ್ಷತೆವಹಿಸಿದ್ದ ಶಿವಬೋಧರಂಗ ಮಠದ ಪೀಠಾಧಿಪತಿ ಶ್ರೀಧರಬೋಧ ಸ್ವಾಮೀಜಿ ಮಾತನಾಡಿ ಇಂದು ನೆಡುವ ಸಸಿಯು ಸಮಾಜಕ್ಕೆ ಬಹುದೊಡ್ಡ ಕೊಡುಗೆಯಾಗುತ್ತದೆ.ಸಸಿಗಳ ಪಾಲನೆ, ಪೋಷಣೆಯನ್ನು ಮಾಡಿ ಬೆಳೆಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದರು.

ಅರಣ್ಯಇಲಾಖೆಯಿಂದ ಸಸಿ ನೆಡುವ ಅಭಿಯಾನಕ್ಕೆ ಪ್ರೇರಣೆ ನೀಡುತ್ತಿರುವುದು ವಲಯ ಅರಣ್ಯಾಧಿಕಾರಿ ಸಂಜೀವ ಸವಸುದ್ದಿ ಅವರ ಕ್ರೀಯಾಶೀಲತೆಯು ಶ್ಲಾಘನೀಯವಾಗಿದೆ ಎಂದರು.

ಮುಖ್ಯ ಅತಿಥಿಯಾಗಿ ಬಾಲಶೇಖರ ಬಂದಿ, ಅರಣ್ಯ ಇಲಾಖೆಯ ಬೀಟ ಅಧಿಕಾರಿ ಮಹಾಂತೇಶ ಹಿಪ್ಪರಗಿ, ಪ್ರೌಢ ಶಾಲೆಯ ಮುಖ್ಯ ಶಿಕ್ಷಕಿ ಕೆ.ಆರ್.ಪಿರೋಜಿ, ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಎಂ.ಎಂ.ಕೆಂಚನ್ನವರ ಭಾಗವಹಿಸಿದ್ದರು. ಶಿಕ್ಷಕಿ ಶೀಲಾ ಕಮತಗಿ ಮತ್ತು ಎಸ್ಆರ್‌ಬಿ ಪಾಟೀಲ ನಿರೂಪಿಸಿದರು.

ಶಾಲೆಯ ಆವರಣದಲ್ಲಿ ನೂರಕ್ಕೆ ಅಧಿಕ ಸಸಿಗಳನ್ನು ನೆಟ್ಟು ನೀರೂಣಿಸಿದರು.

'ಪರಿಸರ ಉಳಿಸಿರಿ, ಪರಿಸರ ಬೆಳೆಸಿರಿ' ಎಂದು ಘೋಷಣೆಗಳನ್ನು ಹೇಳಿದರು.

# ಕಾಂಗ್ರೆಸ್ ಸರ್ಕಾರ ಲಿಂಗಾಯತರಿಗೆ ಸಿಎಂ ಸ್ಥಾನ ನೀಡಬೇಕು: ಶ್ರೀಶೈಲ ಜಗದ್ಗುರುಗಳ ಆಗ್ರಹ

**ಚಿಕ್ಕೋಡಿ (ಬೆಳಗಾವಿ) :** ಕರ್ನಾಟಕ ರಾಜ್ಯದಲ್ಲಿ ರಾಜಕೀಯ ಹಲವು ಕುತೂಹಲಕಾರಿ ಚರ್ಚೆಗಳಿಗೆ ಕಾರಣವಾಗುತ್ತಿದೆ. ಪ್ರಮುಖವಾಗಿ ಸಿಎಂ ಸ್ಥಾನಕ್ಕೆ ಬೇರೆಯವರನ್ನು ತರಬೇಕು ಹಾಗೂ ಡಿಸಿಎಂ ಸ್ಥಾನಗಳನ್ನು ಇನ್ನಷ್ಟು ವಿಸ್ತರಣೆ ಮಾಡಬೇಕು ಎಂಬ ಬಗ್ಗೆ ಚರ್ಚೆ ನಡೆಯುತ್ತಿದೆ. ಇದರಿಂದ ಕಾಂಗ್ರೆಸ್ ಪಕ್ಷ-ಕ್ಕೆ ವಿರಶೈವ ಲಿಂಗಾಯತರ ಕೊಡುಗೆ ಅಪಾರವಾಗಿ ಇರುವುದರಿಂದ ಲಿಂಗಾಯತ ನಾಯಕರನ್ನು ಕಾಂಗ್ರೆಸ್ ಪಕ್ಷದ ಹೈಕಮಾಂಡ್ ಕಡೆಗಣಿಸಬಾರದು ಎಂದು ಶ್ರೀಶೈಲ ಪೀಠದ ಜಗದ್ಗುರುಗಳಾದ ಡಾಕ್ಟರ್ ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಆಗ್ರಹಿಸಿದ್ದಾರೆ.

ತಾಲೂಕಿನ ಸುಕ್ಷೇತ್ರ ಯಡೂರ ಗ್ರಾಮದಲ್ಲಿ ಮಾಧ್ಯಮಗಳ ಜೊತೆ ಮಾತನಾಡುತ್ತಾ, ಲಿಂಗಾಯತ ಮತದಾರರು ಹಿಂದಿನ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಮೇಲೆ ವಿಶ್ವಾಸ ಇಟ್ಟು ಹೆಚ್ಚಿನ ಮತಗಳು ನೀಡಿ ಅಧಿಕಾರಕ್ಕೆ ತಂದಿದ್ದಾರೆ. ಸದ್ಯಕ್ಕೆ ರಾಜ್ಯದಲ್ಲಿ ಮುಖ್ಯಮಂತ್ರಿ ಸ್ಥಾನಕ್ಕೆ ಬೇರೆಯವರನ್ನು ತರಬೇಕು ಮತ್ತು ಉಪ ಮುಖ್ಯಮಂತ್ರಿ ಸ್ಥಾನಗಳನ್ನು ಹೆಚ್ಚಿಗೆ ಮಾಡಬೇಕುಎಂದುಚರ್ಚೆನಡೆಯುತ್ತಿದೆ.ಏನಾದರೂ ಬದಲಾವಣೆ ಮಾಡಿದರೆ ವೀರಶೈವ ಲಿಂಗಾಯತ ಸಮುದಾಯದ ನಾಯಕರನ್ನು ಕಡೆಗಣಿಸಬಾರದು ಎಂದು ಹೇಳಿದರು.

ನಮ್ಮ ಸಮುದಾಯದಲ್ಲಿ ಹಲವು ನಾಯಕರು ಈಗಾಗಲೇ ಸಚಿವ ಸಂಪುಟದಲ್ಲಿ ಇದ್ದಾ-ರೆ. ಎಂ.ಬಿ ಪಾಟೀಲ್, ಈಶ್ವರ್ ಖಂಡ್ರೆ, ಎಸ್. ಎಸ್. ಮಲ್ಲಿಕಾರ್ಜುನ, ಸಮಾಜದ ಹಿರಿಯರಾದ ಶಾಮನೂರು ಶಿವಶಂಕರಪ್ಪ ಇಂತಹವರಿಗೆ ಅವಕಾಶ ನೀಡಬೇಕು. ಈ ಕುರಿತು ಕಾಶಿ, ಉಜ್ಜಯಿನಿ, ಜಗದ್ಗುರುಗಳ ಜೊತೆಗೂ ಚರ್ಚೆ ಮಾಡಲಾಗಿದೆ. ವೀರಶೈವ ಲಿಂಗಾಯತ ಸಚಿವರಿಗೆ ಹೆಚ್ಚಿನ ಸ್ಥಾನ ಮಾನ ಕೊಡಬೇಕು. ಹಿರಿಯರಿಗೆ ಹೆಚ್ಚಿನ ಜವಾಬ್ದಾರಿ ನೀಡಿದರೆ ವೀರಶೈವ ಸಮುದಾಯಕ್ಕೆ ನ್ಯಾಯ ಒದಗಿಸಿ ಕೊಟ್ಟಂತಾಗುತ್ತದೆ ಎಂದು ಶ್ರೀಗಳು ಹೇಳಿದರು.

ಯಾವುದೇ ಪಕ್ಷದಲ್ಲಿ ವೀರಶೈವ ಲಿಂಗಾಯತ ಸಮುದಾಯವನ್ನು ಕಡೆಗಣಿಸಿದರೆ ಒಳ್ಳೆಯ ಬೆಳವಣಿಗೆ ಆಗುವುದಿಲ್ಲ. ಈ ಹಿಂದೆ ಕೂಡ ಅದರ ಪರಿಣಾಮವನ್ನು ಅನುಭವಿಸಿದ್ದಾರೆ ಎಂದು ತಿಳಿಸಿದರು. ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಾಗ ಯಾರಿಗೆ ಎಷ್ಟು ವರ್ಷ ಸಿಎಂ ಸ್ಥಾನ ಎಂಬುದ ಕುರಿತು ಒಡಂಬಡಿಕೆ ಆಗಿರುವರು ನಮಗೆ ಮಾಹಿತಿ ಇಲ್ಲ. ಏನಾದರೂ ಆ ರೀತಿ ಮಾತುಕತೆ ಆಗಿದ್ರೆ ಅದೇ ರೀತಿಯಲ್ಲಿ ಸಾಗುವುದು ಒಳ್ಳೆಯದೆಂದು ಶ್ರೀಗಳು ಅಭಿಪ್ರಾಯಪಟ್ಟರು.

# ಮತದಾನದ ಅರಿವು ವಿದ್ಯಾರ್ಥಿಗಳಿಗೆ ಅಗತ್ಯ: ಗಿರೆಣ್ಣವರ



**ಮೂಡಲಗಿ :** ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ನಡೆಯುವ ಮತದಾನದ ತಿಳುವಳಿಕೆ ವಿದ್ಯಾರ್ಥಿಗಳಿಗೆ ತುಂಬಾ ಅವಶ್ಯ ಎಂದು ಸರಕಾರಿ ಮಾದರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ ಪ್ರಧಾನ ಗುರುಗಳು ಎ.ವ್ಹಿ. ಗಿರೆಣ್ಣವರಹೇಳಿದರು. ಶಾಲೆಯಲ್ಲಿಪ್ರಾಯೋಗಿಕವಾಗಿ ನಡೆದ ಶಾಲಾ ಸಂಸತ್ತು ಚುನಾವಣೆ ಸಂದರ್ಭದಲ್ಲಿ ಮಾತನಾಡಿದರು. ವಿದ್ಯಾರ್ಥಿಗಳಿಗೆ ಮತದಾನದ ಪದ್ಧತಿ ಹಾಗೂ ಪ್ರಜಾಪ್ರಭುತ್ವದ ವ್ಯವಸ್ಥೆಯನ್ನು ಗೌರವಿಸುವುದಕ್ಕಾಗಿ ಶಾಲಾ ಸಂಸತ್ತನ್ನು ವಿದ್ಯುನ್ಮಾನ ಮತಯಂತ್ರ ಉಪಯೋಗಿಸಿ ಪ್ರಾಯೋಗಿಕವಾಗಿ ಈ ಚುನಾವಣೆ ನಡೆಸಲಾಗುತ್ತಿದೆ. ವಿದ್ಯಾರ್ಥಿಗಳಿಗೆ ಮತದಾನ ಮಾಡುವ ಪದ್ಧತಿ ಹಾಗೂ ನಾಯಕನ ಆಯ್ಕೆ ಹೇಗೆ ಮಾಡುವುದು ಮತ್ತು ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣ ಬೆಳೆಸುವುದಕ್ಕಾಗಿ ಈ ಶಾಲಾ ಸಂಸತ್ತನ್ನು ನಡೆಸಲಾಗುತ್ತಿದೆ.

ಚುನಾವಣಾ ಅಧಿಕಾರಿಗಳಾಗಿ ಶಿಕ್ಷಕರಾದ ಕುಸುಮಾ ಚಿಗರಿ, ವಿಮಲಾಕ್ಷಿ ತೋರಗಲ್, ಸುಜಾತಾ ಕೋಳಿ, ಪುಷ್ಪಾ ಭರಮದೆ, ಲಕ್ಷ್ಮೀ ಹೆಬ್ಬಾಳ, ಪ್ರೀಯಂಕಾ ಡಿ.ಕೆ. ಪಾಲ್ಗೊಂಡಿದ್ದರು. ಹಾಗೂ ಶಿಕ್ಷಕರಾದ ಎಂ.ಡಿ.ಗೋಮಾಡಿ,ವಾಯ್.ಆರ್.ಸೋಮಶೇಖರ, ಬಸವರಾಜ ನಾಯಿಕ, ಚನ್ನಬಸವರಾಜ ಶೀರಿ, ಹೊಳೆಪ್ಪ ಗದಾಡಿ ಕಾರ್ಯಕ್ರಮ ಸಂಘಟಿಸಿದ್ದರು.

# ಯಲಬುರ್ಗಾ: ಡೇ-ನಲ್ಮ್ ಯೋಜನೆಯಡಿ ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ಕೊಪ್ಪಳ :** ಯಲಬುರ್ಗಾ ಪಟ್ಟಣ ಪಂಚಾಯತ್ ವತಿಯಿಂದ 2024-25ನೇ ಸಾಲಿನ ದೀನದಯಾಳ್ ಅಂತ್ಯೋದಯ ಯೋಜನೆ-ನಲ್ಮ್ ಅಭಿಯಾನ ರಾಜ್ಯ ಯೋಜನೆಯಡಿ ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಸ್ವಯಂ ಉದ್ಯೋಗಕ್ಕಾಗಿ ಸಾಲ ಸೌಲಭ್ಯಕ್ಕಾಗಿ 4 ಜನ ಫಲಾನುಭವಿಗಳಿಗೆ, 10 ಸ್ವಸಹಾಯ ಗುಂಪು ರಚನೆ ಹಾಗೂ 5 ಗುಂಪುಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಸಾಲ ಸೌಲಭ್ಯ (ಕ್ರೇಡಿಟ್ ಲಿಂಕೇಜ್)ದ ಗುರಿಯನ್ನು ನಿಗದಿಪಡಿಸಲಾಗಿದೆ.

ಅರ್ಜಿ ಸಲ್ಲಿಸಲು ಅಭ್ಯರ್ಥಿಗಳು 18 ರಿಂದ 35 ವರ್ಷದೊಳಗಿರಬೇಕು. ಅರ್ಜಿಗಳನ್ನು ಪಟ್ಟಣ ಪಂಚಾಯತ್ ಕಾರ್ಯಾಲಯದ ವಿಷಯ ನಿರ್ವಾಹಕರ ಹತ್ತಿರ ಪಡೆದು ಭರ್ತಿ ಮಾಡಿ, ಪ್ರಸಕ್ತ ಸಾಲಿನ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಿದ್ಯಾರ್ಹತೆ ಪ್ರಮಾಣ ಪತ್ರ, ಮತದಾರರ ಗುರುತಿನ ಚೀಟಿ, ಆಧಾರ್ ಕಾರ್ಡ್, ಬಿ.ಪಿ.ಎಲ್ ರೇಶನ್ ಕಾರ್ಡ್, ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ ಹಾಗೂ 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳೊಂದಿಗೆ ಜುಲೈ 10 ರೊಳಗೆ ಕಚೇರಿ ವೇಳೆಯಲ್ಲಿ ಅರ್ಜಿಯನ್ನು ಸಲ್ಲಿಸಬೇಕು ಎಂದು ಯಲಬುರ್ಗಾ ಪಟ್ಟಣ ಪಂಚಾಯತ್ ಮುಖ್ಯಧಿಕಾರಿಗಳು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈಲು ಓಡಿಸಲು, ನಿಲುಗಡೆ ಮಾಡಲು ಮನವಿ

**ರಬಕವಿ-ಬನಹಟ್ಟಿ :** ಹುಬ್ಬಳ್ಳಿ -ಅಹ್ಮದಾಬಾದ್ ಮತ್ತು ಅಹ್ಮದಾಬಾದ್ -ಹುಬ್ಬಳ್ಳಿ, ಹುಬ್ಬಳ್ಳಿ-ಹೃಷಿಕೇಶ ಮತ್ತು ಹೃಷಿಕೇಶ-ಹುಬ್ಬಳ್ಳಿ ನಡುವೆ ಓಡಾಡುತ್ತಿದ್ದ ರೈಲುಗಳನ್ನು ಬಂದ್ ಮಾಡಲಾಗಿದೆ. ಈ ರೈಲುಗಳು ಮತ್ತೆ ಓಡಾಡುವಂತಾಗಬೇಕು.

ಬೆಂಗಳೂರು ಪಂಢರಪೂರ ಮತ್ತು ಪಂಢರಪೂರ ಬೆಂಗಳೂರು ಮಧ್ಯದಲ್ಲಿನ ರೈಲುಗಳ ಸಂಚಾರ ನಿಲ್ಲಿಸಲಾಗಿದ್ದು ಮತ್ತೇ ಈ ರೈಲಗಳನ್ನು ಆರಂಭಿಸಬೇಕು ಎಂದು ಸಾಮಾಜಿಕ ಹೋರಾಟಗಾರರಾದ ಮುರಲಿ ಕಾಬ್ರಾ ಆಗ್ರಹಿಸಿದ್ದಾರೆ.

ಎಲ್ಲಕ್ಕಿಂತ ಮುಖ್ಯವಾಗಿ ಬೆಂಗಳೂರು- ಜೋಧಪುರ ಮತ್ತು ಜೋಧಪುರ - ಬೆಂಗಳೂರು ಮಧ್ಯದಲ್ಲಿ ಚಲಿಸುವ ರೈಲು ಒಂದು ನಿಮಿಷಗಳ ಕಾಲ ಕುಡಚಿ ರೈಲು ನಿಲ್ದಾಣದಲ್ಲಿ ನಿಲುಗಡೆಯಾಗಬೇಕು. ಈ ರೈಲುಗಳ ಓಡಾಟದಿಂದ ಮತ್ತು ಕುಡಚಿ ರೈಲು ನಿಲ್ದಾಣದಲ್ಲಿ ನಿಲುಗಡೆಯಾಗುವುದರಿಂದ ರಬಕವಿ ಬನಹಟ್ಟಿ, ಅಥಣಿ, ರಾಯಬಾಗ, ಜಮಖಂಡಿ, ಮುಧೋಳ ತಾಲ್ಲೂಕಿನ ಬಹಳಷ್ಟು ಪ್ರವಾಸಿಗರಿಗೆ, ಮತ್ತು ವ್ಯಾಪಾರಸ್ಥರಿಗೆ ಅನುಕೂಲವಾಗಲಿದೆ.

ಈ ನಿಟ್ಟಿನಲ್ಲಿ ರೇಲ್ವೆ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಈ ಭಾಗದ ಪ್ರಯಾಣಿಕರಿಗೆ, ವ್ಯಾಪಾರಸ್ಥರಿಗೆ ಅನುಕೂಲ ಮಾಡಿಕೊಡಬೇಕು. ಈ ಕುರಿತು ಕೇಂದ್ರ ರೇಲ್ವೆ ಸಚಿವರಿಗೆ ಮತ್ತು ನೈರುತ್ಯ ರೇಲ್ವೆ ಇಲಾಖೆಯ ಅಧಿಕಾರಿಗಳಿಗೆ ಪತ್ರ ಬರೆದಿರುವುದಾಗಿ ಕಾಬ್ರಾ ತಿಳಿಸಿದರು.

# ಉದ್ಘಾಟನೆಗೆ ಕಾಯುತ್ತಿರುವ ಬಸ್ ನಿಲ್ದಾಣ; ಪ್ರಯಾಣಿಕರ ಪರದಾಟ

## ಬಸ್ ನಿಲ್ದಾಣದಲ್ಲಿ ನಿಲ್ಲಲು ಮತ್ತು ಕುಳಿತುಕೊಳ್ಳಲು ಸ್ಥಳವೇ ಇಲ್ಲ। ವಿದ್ಯಾರ್ಥಿಗಳಿಗೆ ದಿನನಿತ್ಯದ ತೊಂದರೆ

## * ಬಸ್ ನಿಲ್ದಾಣ ಪ್ರವೇಶಿಸದಂತೆ ಪತ್ರಾಸಿನ ತಡೆಗೋಡೆಯನ್ನು ನಿರ್ಮಾಣ ಮಾಡಲಾಗಿದೆ

● ಕಿರಣ ಶ್ರೀಶೈಲ ಆಳಗಿ

**ರಬಕವಿ-ಬನಹಟ್ಟಿ :** ಬನಹಟ್ಟಿ ಬಸ್ ನಿಲ್ದಾಣದ ಕಾಮಗಾರಿ ಪೂರ್ಣಗೊಂಡಿದ್ದರೂ ಇನ್ನೂ ಉದ್ಘಾಟನೆಯಾಗದೆ ಇರುವುದರಿಂದ ಪ್ರಯಾಣಿಕರಿಗೆ ಮತ್ತು ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಬಹಳಷ್ಟು ತೊಂದರೆಯಾಗುತ್ತಿದೆ.

ಹಳೇ ಕಟ್ಟಡ ಕೆಡವಲಾಗಿದ್ದು, ಬಸ್ ನಿಲ್ದಾಣಕ್ಕೆ ಬರುವ ಪ್ರಯಾಣಿಕರು ನಿಂತುಕೊಂಡೇ ಬಸ್ ಗಾಗಿ ಕಾಯುವ ಪರಿಸ್ಥಿತಿ ನಿರ್ಮಾಣಗೊಂಡಿದೆ. ಅದರಲ್ಲೂ ಹಿರಿಯ ವ್ಯಕ್ತಿಗಳಿಗೆ ಮತ್ತು ಚಿಕ್ಕ ಮಕ್ಕಳಿಗೆ ಬಿಸಿಲು ಮತ್ತು ಮಳೆಯಿಂದಾಗಿ ಬಹಳಷ್ಟು ತೊಂದರೆಯಾಗಿದೆ. ವ್ಯವಸ್ಥಿತವಾಗಿ ಬಸ್ ಗಳು ನಿಂತುಕೊಳ್ಳಲು ಸ್ಥಳಾವಕಾಶ ಇಲ್ಲದಂತಾಗಿದೆ.

ದಿನನಿತ್ಯ ಶಾಲಾ ಕಾಲೇಜುಗಳನ್ನು ಮುಗಿಸಿಕೊಂಡು ಮನೆಗಳಿಗೆ ತೆರಳುವ ವಿದ್ಯಾರ್ಥಿಗಳು ತಮ್ಮ ಗ್ರಾಮಗಳ ಬಸ್ ಬರುವವರೆಗೂ ನಿಂತುಕೊಳ್ಳಬೇಕಾಗಿದೆ. ಕೆಲವು ಬಾರಿ ಗಂಟೆಗಟ್ಟಲೇ ನಿಂತುಕೊಂಡು ಕಾಯಬೇಕಾಗಿದೆ.

ಸದ್ಯ ಮಳೆಗಾಲ ಇರುವುದರಿಂದ ಪ್ರಯಾಣಿಕರಿಗೆ ಮತ್ತು ವಿದ್ಯಾರ್ಥಿನಿಯರಿಗೆ ಮತ್ತಷ್ಟು ಸಮಸ್ಯೆಯಾಗಿದೆ. ಹಳೆಯ ಬಸ್ ನಿಲ್ದಾಣ ಕಟ್ಟಡವನ್ನು ಸಂಪೂರ್ಣವಾಗಿ ತೆಗೆದು ಹಾಕಿದ್ದರಿಂದ ಮಳೆ ಮತ್ತು ಗಾಳಿಯಿಂದ ರಕ್ಷಣೆ ಪಡೆದುಕೊಳ್ಳಲು ಯಾವುದೇ ವ್ಯವಸ್ಥೆಗಳು ಬಸ್ ನಿಲ್ದಾಣದಲ್ಲಿ ಇಲ್ಲವಾಗಿವೆ.





"ರಬಕವಿ ಮತ್ತು ಬನಹಟ್ಟಿಯಲ್ಲಿ ನಿರ್ಮಾಣ ಮಾಡಲಾಗಿರುವ ಬಸ್ ನಿಲ್ದಾಣಗಳ ಉದ್ಘಾಟನೆಯನ್ನು ನೆರವೇರಿಸಲು ಬಾಗಲಕೋಟೆಯ ಸಾರಿಗೆ ಇಲಾಖೆಯ ಜಿಲ್ಲಾ ಮುಖ್ಯಸ್ಥರ ಗಮನಕ್ಕೆ ತರಲಾಗಿದೆ. ಎರಡೂ ಬಸ್ ನಿಲ್ದಾಣಗಳನ್ನು ಪರಿಶೀಲಿಸುವಂತೆ ತಿಳಿಸಿದ್ದೇನೆ. ಸಾರಿಗೆ ಇಲಾಖೆಯ ಸಚಿವರನ್ನು ಕರೆಯಿಸಿ ಆದಷ್ಟು ಬೇಗನೆ ಉದ್ಘಾಟನೆಯನ್ನು ನೆರವೇರಿಸುವಂತೆ ಅಧಿಕಾರಿಗಳ ಜೊತೆಗೆ ಚರ್ಚಿಸಿದ್ದೇನೆ.

◆ ಸಿದ್ದು ಸವದಿ
ಶಾಸಕ ತೇರದಾಳ ಮತಕ್ಷೇತ್ರ.

ಕೆಡವಿದ ಹಳೆಯ ಬಸ್ ನಿಲ್ದಾಣದ ಕಟ್ಟಡದಲ್ಲಿರುವ ಪ್ರದೇಶವನ್ನು ಇನ್ನಷ್ಟು ಸ್ವಚ್ಛ ಮಾಡಬೇಕಾಗಿದೆ.

ನೂತನ ಬಸ್ ನಿಲ್ದಾಣದಲ್ಲಿ ನಿರ್ಮಾಣ ಮಾಡಲಾಗಿರುವ ಶೌಚಾಲಯಗಳು ಕೂಡಾ ಪ್ರಯಾಣಿಕರಿಗೆ ಲಭ್ಯವಿಲ್ಲ. ಇದು ಕೂಡಾ ಸಮಸ್ಯೆಯಾಗಿದೆ. ಬಹಳಷ್ಟು ಜನರು ಬಸ್ ನಿಲ್ದಾಣದ ಹಿಂದಿರುವ ಪ್ರದೇಶದಲ್ಲಿ ಮೂತ್ರ ವಿಸರ್ಜನೆಯನ್ನು ಮಾಡುತ್ತಿದ್ದಾರೆ. ಇದರಿಂದಾಗಿ ಬಸ್ ನಿಲ್ದಾಣ ಗಬ್ಬೆದ್ದು ನಾರುತ್ತಿದೆ.

ಆದ್ದರಿಂದ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಕೂಡಲೇ ಈ ಕಡೆಗೆ ಗಮನ ನೀಡಿ ಆದಷ್ಟು ಬೇಗನೆ ಬಸ್ ನಿಲ್ದಾಣದ ಉದ್ಘಾಟನೆಗೆ ಕ್ರಮ ತೆಗೆದುಕೊಳ್ಳಬೇಕು ಎಂದು ಸ್ಥಳೀಯರಾದ ಬಸವರಾಜ ಪುಟಾಣಿ,

ಗೋಪಾಲ ಭಟ್ಟಡ, ಪ್ರಕಾಶ ಹೋಳಗಿ, ಎಸ್. ಎಂ. ಫಕೀರಪೂರ, ಅವಿನಾಶ ಹಟ್ಟಿ, ಮಹಾಶಾಂತ ಶೆಟ್ಟಿ, ಗೌರಿ ಮಿಳ್ಳಿ ಸೇರಿದಂತೆ ಅನೇಕರು ಬಲವಾಗಿ ಆಗ್ರಹಿಸಿದ್ದಾರೆ.

# ಕೆರೆ ಅಂಗಳದಲ್ಲಿ ಸಸಿ ನೆಡುವ ಕಾರ್ಯಕ್ರಮ



**ಚಿಮ್ಮಡ :** ಗ್ರಾಮದಲ್ಲಿ ನಿರ್ಮಿಸಲಾದ ದೊಡ್ಡ ಕೆರೆ ಅಂಗಳದಲ್ಲಿ ಸ್ಥಳಿಯ ಗ್ರಾಮ ಪಂಚಾಯತಿ ಹಾಗೂ ಸಾಮಾಜಿ ಅರಣ್ಯ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಸಸಿ ನೆಡುವ ಕಾರ್ಯಕ್ರಮ ಗುರುವಾರ ಆಯೋಜಿಸಲಾಗಿತ್ತು.

ಲಕ್ಷ ವೃಕ್ಷ ಅಭಿಯಾಣ ಯೊಜನೆಯಡಿ ಸಸಿ ನೆಡುವ ಕಾರ್ಯಕ್ರಮಕ್ಕೆ ಸ್ಥಳಿಯ ಗ್ರಾಮ ಪಂಚಾಯತಿ ಅಧ್ಯಕ್ಷೆ ಶ್ರೀಮತಿ ಮಾಲಾ ಅಶೋಕ ಮೋಟಗಿಯವರು ಗ್ರಾಮದ ಕೆರೆ ಅಂಗಳದಲ್ಲಿ ವೃಕ್ಷ ನೆಡುವ ಮೂಲಕ ಚಾಲನೆ ನೀಡಿದರು.

ಗ್ರಾಮದ ಕೆರೆ ಅಂಗಳ ಹಾಗೂ ಸುತ್ತಮುತ್ತಲಿನಲ್ಲಿ ಸುಮಾರು 1200 ಸಸಿ ನೆಡಲಾಗಿದ್ದು ಅವುಗಳನ್ನು ಗ್ರಾಮ ಪಂಚಾಯತಿ ಹಾಗೂ ಸಾಮಾಜಿಕ ಅರಣ್ಯ ಇಲಾಖೆಯಿಂದ ಪೋಷಿಸಿ ಬೆಳೆಸಲು ರೂಪುರೆಷೆ ತಯಾರಿಸಲಾಗಿದ್ದು ಒಂದೂ ಗಿಡ ಹಾಳಾಗದಂತೆ ಕ್ರಮ ಕೈಗೊಳ್ಳಲಾಗುವುದೆಂದು ಗ್ರಾಮ ಪಂಚಾಯತಿ ಅಧ್ಯಕ್ಷೆ ಶ್ರೀಮತಿ ಮಾಲಾ ಅಶೋಕ ಮೋಟಗಿಯವರು ತಿಳಿಸಿದರು.

ಸಾಮಾಜಿಕ ಅರಣ್ಯ ಇಲಾಖೆಯ ಅಧಿಕಾರಿ ಮಹಾಂತೇಶ ಚಂಡಕಿ, ಗ್ರಾ.ಪಂ. ಸದಸ್ಯ ನಾಗಪ್ಪ ಆಲಕನೂರ, ಅಶೋಕ ಮೋಟಗಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ತೈಲ ಏರಿಕೆ ಖಂಡಿಸಿ ಸೈಕಲ್ ಬೈಕ್ ಮೂಲಕ ಪ್ರತಿಭಟಿಸಿದ ಬಿಜೆಪಿ ಕಾರ್ಯಕರ್ತರು

**ಮೂಡಲಗಿ :** ರಾಜ್ಯ ಕಾಂಗ್ರೆಸ್ ಸರ್ಕಾರದ ಪೆಟ್ರೋಲ್ ಡಿಸೇಲ್ ಬೆಲೆ ಏರಿಕೆಯ ನಿರ್ಧಾರವನ್ನು ಖಂಡಿಸಿ ಭಾಜಪ ಅರಭಾಂವಿ ಮಂಡಳವತಿಯಿಂದ ಗುರುವಾರ ಕಲ್ಮೇಶ್ವರ ವೃತ್ತದಲ್ಲಿ ಕರ್ನಾಟಕರ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಿದರು.

ಭಾಜಪ ಅರಭಾಂವಿ ಮಂಡಳದ ಪ್ರಧಾನ ಕಾರ್ಯದರ್ಶಿ ಮಹಾಂತೇಶ ಕುಡಚಿ ಮಾತನಾಡಿ,ಬಿಟ್ಟಿ ಭಾಗ್ಯಗಳಿಗಾಗಿ ಬಡವರ ದಿನ ನಿತ್ಯದ ವಸ್ತುಗಳನ್ನ ಬೆಲೆಯನ್ನು ಗಗನಕ್ಕೆರಿಸುತ್ತಿರುವ ಕಾಂಗ್ರೆಸ ಪಕ್ಷದ ನಡೆ ಖಂಡನಿಯ, ನಮ್ಮ ಸರ್ಕಾರದ ವಿರುದ್ದ ಮಾತನಾಡುತ್ತಿದ್ದ ಕಾಂಗ್ರೆಸ ಪಕ್ಷವು ಇಂದು ಜನ ತತ್ತರಿಸುವಂತಹ ಬೆಲೆಯನ್ನು ಜನರ ಮೇಲೆ ಹೇರುತ್ತಿದೆ



ತರಕಾರಿ,ದವಸ ಧಾನ್ಯಗಳ ಬೆಲೆ, ಬಾಂಡ ಪೇಪರ, ನೊಂದಣಿ, ವಿದ್ಯುತ, ಮಧ್ಯ ಈಗ ಪೆಟ್ರೋಲ್ ಡಿಸೇಲಗಳ ಬೆಲೆ ಹೆಚ್ಚಿಸುವದರಿಂದ ಜನರ ಜೀವನದ ಜೊತೆ ಆಟವಾಡುತ್ತಿದೆ ಎಂದರು,

ಪ್ರತಿಭಟನೆಯಲ್ಲಿ ಸೈಕಲ್ ಹಾಗೂ ಬೈಕಗಳನ್ನು ವೃತ್ತದಲ್ಲಿ ನಿಲ್ಲಿಸಿ ಪ್ರತಿಭಟಿಸಿದರು,

ಕರ್ನಾಟಕ ಸರ್ಕಾರದ ತೈಲ ಮತ್ತು ವಿದ್ಯುತ್ ಬೆಲೆ ಅಲ್ಲದೆ ಇನ್ನು ಹಲವಾರು ತರಹದ ಬೆಲೆ ಏರಿಕೆ ಮಾಡಿ ಕರ್ನಾಟಕದ ಜನತೆಗೆ ಹೊರೆ ಮಾಡುತ್ತಿರುವ ಕರ್ನಾಟಕ ಸರಕಾರದ ವಿರುದ್ದ ಬೆಲೆ ಎರಿಕೆ ಇಳಿಸುವರೆಗೆ ಭಾರತೀಯ ಜನತಾ ಪಾರ್ಟಿ ನಿರಂತರ ಹೋರಾಟ ನಡೆಸುತ್ತಿರುವ ಕುರಿತು ಮನವಿ ಪತ್ರವನ್ನು ತಹಶೀಲ್ದಾರ ಮಹಾದೇವ ಸನಮೂರಿ ಅವರ ಮೂಲಕ ರಾಜ್ಯ ಸರ್ಕಾರಕ್ಕೆ ನೀಡಿದರು,

ಈ ಸಮಯದಲ್ಲಿ ಭಾಜಪ ಅರಭಾಂವಿ ಮಂಡಳದ ಅಧ್ಯಕ್ಷ ಮಹಾದೇವ ಶೆಕ್ಕಿ, ಮುಖಂಡರಾದ ರವೀಂದ್ರ ಸೋನವಾಲ್ಕರ,ಬಸವರಾಜ ಪಾಟೀಲ್,ಈರಪ್ಪ ಬನ್ನೂರ,ರೇವಪ್ಪ ಕುರಬಗಟ್ಟಿ,ಕಾರ್ಯಕರ್ತರಾದ ಹಣಮಂತ ಗುಡ್ಲಮನಿ,ಪಾಂಡು ಮಹೇಂದ್ರಕರ, ಆನಂದ ಟಪಾಲದಾರ,ಅನ್ವರ ನದಾಪ,ಪರಪಪ ಹಡಪದ,ಸಿದ್ದು ಗಡ್ಡೆಕಾರ ಸಹಿತ ಹಲವರು ಉಪಸ್ಥಿತರಿದ್ದರು.

"SIHI KAHI" Kannada Daily Morning, Editor, Owner, Publisher, Printer by MARUTI BASAVANTAPPA HOASAMANI Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at SUDIN PRINTERS, Sector No. 33, Shop No. 38 & 40, Opp. Ambedkar Bhavan, NAVANAGAR, BAGALKOT-587 101. Dist : Bagalkot, Karnataka State